MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 265 | ಬುಧವಾರ : 06-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 265 | WEDNESDAY : 06-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಗೊರೆಬಾಳದಲ್ಲಿ ಎಂಎಲ್‌ಸಿ ಕಾಂಗ್ರೆಸ್ ಕಾರ್ಯಕರ್ತರ ಮಧ್ಯೆ ಜಟಾಪಟಿ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಆ.05**–ತಾಲೂಕಿನ ಗೊರೆಬಾಳ ಗ್ರಾಮದಲ್ಲಿ ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪುರ ಹಾಗೂ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್ ಮೇಲೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ವಾಗ್ವಾದ್ ನಡೆಸಿ ಹಲ್ಲೆಗೆ ಯತ್ನಿಸಿದ ಘಟನೆ ಜರುಗಿದೆ.

ಗೊರೆಬಾಳದಲ್ಲಿ ಕೃಷಿ ಸಹಕಾರ ಸಂಘದ ಕಟ್ಟಡದ ಉದ್ಘಾಟನೆ ಮಾಡಿ ಎಂಎಲ್‌ಸಿ ಶರಣಗೌಡ ಪಾಟೀಲ್ ಬಯ್ಯಾಪುರ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ ಸಮಾರಂಭ ಮುಗಿಸಿಕೊಂಡು ವಾಪಸ್ಸು ಬರುವಾಗ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕರ ಬೆಂಬಲಿಗರು ಎಂಎಲ್‌ಸಿ ಬಯ್ಯಾಪುರರನ್ನು ಅಡ್ಡಗಟ್ಟಿ ಗೋವಿಂದ ನಾಯಕ ಯಾರು ನನಗೇ ಪರಿಚಯವಿಲ್ಲ ಎಂದು ಹೇಗೆ ಹೇಳತಿಯಾ ಎಂದು ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ ಶರಣಗೌಡರ ಮೇಲೆ ಹಲ್ಲೆಗೆ ಯತ್ನಿಸಿ ಕಾರು ಅಡ್ಡಗಟ್ಟಿ ಕ್ಷಮೆ ಕೇಳಲು ಆಗ್ರಹಿಸಿದರು. ಅಲ್ಲದೇ ಓರ್ವ ಕೈಯಲ್ಲಿ ಕಲ್ಲು ಹಿಡಿದು ಹಲ್ಲೆಗೆ ಮುಂದಾದ ಇದಕ್ಕೆ ಆಸ್ಪದ ನೀಡದ ಗ್ರಾಮಸ್ಥರು ಹಲ್ಲೆಗೆ ಮುಂದಾದವರನ್ನು ಸಮದಾನಪಡಿಸಿ ಎಂಎಲ್‌ಸಿ ಶರಣಗೌಡ ರ ರಕ್ಷಣೆ ಮಾಡಿದರು. ಅಲ್ಲದೇ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನ ಗೌಡರು ರಾಜಕೀಯದಲ್ಲಿ ಇದೆಲ್ಲ ಸಾಮಾ ನ್ಯ ಎಂದು ಸಮಜಾಯಿಸಿ ನೀಡಲು ಮುಂದಾದರು ಇವರ ಮಾತು ಕೇಳದ ಕಾಂಗ್ರೆಸ್‌ನ ಒಂದು ಬಣದ ಕಾರ್ಯಕರ್ತರು ಇದಕ್ಕೆಲ್ಲ ನೀವೇ ಕಾರಣ ಎಂದು ಭೂಪನಗೌಡರನ್ನು ತರಾಟೆಗೆ ತೆಗೆದುಕೊಂಡರು.

ಬಯ್ಯಾಪುರ ಬಣದವರು ನೇಮಕ ಮಾಡಿದ ಎಸ್.ಟಿ ಮೋರ್ಚಾದ ಕಾಂಗ್ರೆಸ್ ಅಧ್ಯಕ್ಷ ಜಗದೀಶ ಗೌಡರ ಮೇಲೆ ಹಲ್ಲೆ ಮಾಡುವ ದೃಶ್ಯವು ವಿಡಿಯೋದಲ್ಲಿ ಸೆರೆಯಾಗಿದೆ. ಇದೆ. ಕಾಂಗ್ರೆಸ್‌ನಲ್ಲಿ ಸದ್ಯ ಬಣ ಬಡಿದಾಟದ ಬೂದಿ ಮುಚ್ಚಿದ ಕೆಂಡದಂತೆ ಇದ್ದು ಹಟ್ಟಿ ಚಿನ್ನದ ಗಣ ಯಲ್ಲಿ ಮುಖ್ಯಮಂತ್ರಿಗಳ ಸಮಾರಂಭ ಮುಗಿದ ಬಳಿಕ ಮತ್ತಷ್ಟು ವಿಕೋಪ ಹೋಗುವ ಲಕ್ಷಣಗಳು ಸ್ಪಷ್ಟವಾಗಿದೆ.

## ಹೈಕೋರ್ಟ್ ಎಚ್ಚರಿಕೆ ಹಿನ್ನೆಲೆಯಲ್ಲಿ ಮುಷ್ಕರ ಹಿಂಪಡೆದ ಸಾರಿಗೆ ನೌಕರರು

**ಬೆಂಗಳೂರು,ಆ.05**– ನ್ಯಾಯಾಲಯದ ಆದೇಶ ಉಲ್ಲಂಘಿಸಿ ಮುಷ್ಕರ ನಡೆಸಿದ್ದಕ್ಕೆ ಕೆಂಡಮಂಡಲವಾದ ಹೈಕೋರ್ಟ್ ನೌಕರರನ್ನು ಬಂಧಿಸುವ ಎಚ್ಚರಿಕೆ ಕೊಟ್ಟ ಹಿನ್ನೆಲೆಯಲ್ಲಿ ಸಾರಿಗೆ ನೌಕರರು ತಮ್ಮ ಮುಷ್ಕರವನ್ನು ಹಿಂಪಡೆದಿದ್ದಾರೆ.

ಒಂದು ವೇಳೆ ಮುಷ್ಕರ ಮುಂದುವರೆಸಿದರೆ, ಸಾರಿಗೆ ನೌಕರರ ವಿರುದ್ಧ ಅಗತ್ಯ ಸೇವಾ ನಿರ್ವಹಣ ಕಾಯ್ದೆ ( ಎಸ್ಮಾ) ಅಡಿ ಸರ್ಕಾರಕ್ಕೆ ಕ್ರಮ ಕೈಗೊಳ್ಳಬಹುದು ಎಂದು ಹೈಕೋರ್ಟ್ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಬುಧವಾರದಿಂದ ಮುಷ್ಕರ ಕೈ ಹಿಂಪಡೆಯುವುದಾಗಿ ಸಾರಿಗೆ ಜಂಟಿ ಕ್ರಿಯಾ ಸಮಿತಿಯ ಪರವಾಗಿ ವಕೀಲರು ತಿಳಿಸಿದರು. ಹೈಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮಂಗಳವಾರದಿಂದ ಪ್ರತಿಭಟನೆಗೆ ನಡೆಸುತ್ತಿದ್ದ ಸಾರಿಗೆ ನೌಕರರು ಕರ್ತವ್ಯಕ್ಕೆ ಹಾಜರಾಗಿದ್ದಾರೆ.

ಮಂಗಳವಾರ ಮುಂದುವರೆದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ( ಪಿಐಎಲ್ ) ವಿಚಾರಣೆಯನ್ನು ಕೈಗೆತ್ತಿಕೊಂಡ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು, ನ್ಯಾ.ಸಿ.ಎಂ.ಜೋಷಿ ನೇತೃತ್ವದ ಪೀಠ ನ್ಯಾಯಾಂಗ ನಿಂದನೆಯ ಎಚ್ಚರಿಕೆಯನ್ನೂ ನೀಡಿತು.



ಸರ್ಕಾರಿ ಪರ ವಕೀಲರಾಗಿ ಎಜಿ ಶಶಿಕಿರಣ್ ಶೆಟ್ಟಿ ವಾದ ಮಂಡಿಸಿದರು.ಸಾರಿಗೆ ಇಲಾಖೆಯ ಅಧಿಕಾರಿಗಳು, ಸಂಘಟನೆಯೊಂದಿಗೆ ಸಭೆ ಮಾಡಲಾಗಿದೆ. ರಾತ್ರಿಯಷ್ಟೇ ನೋಟಿಸ್ ಸಿಕ್ಕಿದೆ. ರಾಜಿ ಸಂಧಾನಕ್ಕೆ ಪ್ರಯತ್ನಗಳನ್ನೂ ಮಾಡಲಾಗುತ್ತಿದೆ ಎಂದರು.ಇದಕ್ಕೆ ಮಾತುಕತೆ ಏನಾಗಿದೆ? ಎಂದು ಹೈಕೋರ್ಟ್ ಪ್ರಶ್ನಿಸಿತು.

ಅದಕ್ಕೆ ಎಜಿ, ಈವರೆಗೆ ಸರ್ಕಾರ ನಡೆಸಿದ ಮಾತುಕತೆಗಳ ವಿವರ ನೀಡಿದರು. ಮುಂದುವರಿದು ಇಂಡಸ್ಟ್ರಿಯಲ್ ಡಿಸ್ಪ್ಯೂಟ್ ಕಾಯ್ದೆಯಂತೆ ಸಂಧಾನ ಸಭೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.**(2ನೇಪುಟಕ್ಕೆ)**

## ನಂದವಾಡಗಿ ಏತ ನೀರಾವರಿ ಕಾಮಗಾರಿ ಪೂರ್ಣಗೊಳಿಸಿ : ಬಸವಂತರಾಯ ಕುರಿ




ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಆ.05**–ಕೃಷ್ಣಾ ಮೇಲ್ದಂಡೆ ಯೋಜನ ವ್ಯಾಪ್ತಿಯ ನಂದವಾಡಗಿ ಏತ ನೀರಾವರಿ ಕಾಮಗಾರಿ ತಂತಗೊಳಿಸಲು ಕೂಡಲೇ ತಾಂತ್ರಿಕ ಸಲಹೆ ನೀಡಿ ಕಾಮಗಾರಿ ಪೂರ್ಣಗೊಳಿಸಬೇಕು ಇಲ್ಲದೇ ಹೋದರೆ ಮುಂದಿನ ದಿನಗಳಲ್ಲಿ ಹೋರಾಟ ತೀವ್ರಗೊಳಿಸಲಾಗುವುದು ಎಂದು ನಂದವಾಡಗಿ ಏತ ನೀರಾವರಿ ಹೋರಾಟ ಪ್ರಚಾರ ಸಮಿತಿ ಅಧ್ಯಕ್ಷ ಬಸವಂತರಾಯ ಕುರಿ ಆಗ್ರಹಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ ಅವರು, 2100 ಕೋಟಿ ಅನುದಾನದಲ್ಲಿ ಕಾಮಗಾರಿ ಟೆಂಡರ್ ಕರೆದು 2021ರ ಒಳಗೆ ಮುಗಿಸಬೇಕೆಂದು 2017 ಹೂಣ್ 14ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಚಾಲನೆ ನೀಡಿದ ನಂದವಾಡಗಿ ಏತ ನೀರಾವರಿ ಯೋಜನೆಯಿಂದ 36 ಸಾವಿರ ಹೇಕೇರ್ ಭೂ ಪ್ರದೇಶ ನೀರಾವರಿಗೆ ಒಳಪಡಲಿದೆ. ಈಗಾಗಲೆ ಮೇನ್ ರೈಸಿಂಗ್‌ನ 3 ಕಿ.ಮೀ. ಕಾಮಗಾರಿ ಪೂರ್ಣಗೊಂಡಿದೆ. ಪ್ರಮುಖವಾಗಿ ಕಾಮಗಾರಿ ಗುತ್ತಿಗೆ ಪಡೆದ ಕಂಪನಿಗಳಿಗೆ 1490 ಕೋಟಿ ಪಾವತಿ ಮಾಡಲಾಗಿದೆ. ಆದರೂ ಕಾಮಗಾರಿ ಶೇ 50ರಷ್ಟು ಪೂರ್ಣಗೊಂಡಿಲ್ಲ. ಇದರ ಮದ್ಯೆ ರಾಜ್ಯದಲ್ಲಿ ಹನಿ ನೀರಾವರಿ ಯೋಜನೆಗಳು ವಿಫಲಗೊಂಡಿದ್ದರಿಂದ ಹನಿ ಬದಲು ಪೈಪ್‌ನಿಂದ ಹರಿ ನೀರಾವರಿ ಮಾಡಲು ತಾಂತ್ರಿಕ ಸಲಹೆ ಕೇಳಿದ್ದು ಸರ್ಕಾರ ಸೂಕ್ತ ಸಲಹೆ ನೀಡದೇ ನಿಷ್ಕಾಳಜಿ

## ಪ್ರಜಾಸೌಧ ಕಾಮಗಾರಿ ಸ್ಥಳಕ್ಕೆ ಸಚಿವ ಬೋಸರಾಜು ಭೇಟಿ



ಯುವ ಮಾರ್ಗ ಸುದ್ದಿ

**ಮಾನ್ವಿ,ಆ.05**– ಪಟ್ಟಣದ ಪಿಡ್ಲ್ಯೂಡಿ ಹತ್ತಿರ ನಿರ್ಮಾಣವಾಗುತ್ತಿರುವ ತಾಲೂಕು ಆಡಳಿತ ಭವನ (ಪ್ರಜಾಸೌಧ) ಕಾಮಗಾರಿಯನ್ನು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಪರಿಷತ್‌ನ ಸಭಾ ನಾಯಕರಾದ ಎನ್.ಎಸ್. ಬೋಸರಾಜು ಅವರು ವೀಕ್ಷಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಗುತ್ತಿಗೆದಾರರಾದ ಪ್ರವೀಣ್ ಎಂ. ಈರಣ್ಣ ಅವರಿಗೆ ಕಾಮಗಾರಿಯನ್ನು ತ್ವರಿತ ಗತಿಯಲ್ಲಿ ಹಾಗೂ ಉತ್ತಮ ಗುಣಮಟ್ಟದಿಂದ ಪೂರ್ಣಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಚಿವರ ಭೇಟಿ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್, ಪಂಚ ಗ್ಯಾರಂಟಿಗಳ ಅಧ್ಯಕ್ಷರಾದ ಬಿ.ಕೆ. ಅಂಬರೇಶಪ್ಪ, ವಕೀಲರಾದ ಕೆ. ಶಾಂತಪ್ಪ, ಶಿವಮೂರ್ತಿ, ದೊಡ್ಡಬಸಪ್ಪಗೌಡ ಬೋಗಾವತಿ, ಕಿರಲಿಂಗಪ್ಪ, ಅಮರೇಗೌಡ ಹಂಚಿನಾಳ, ಬಾಲಸ್ವಾಮಿ ಕೊಡಲಿ, ಮಹಂತೇಶ್ ಸ್ವಾಮಿ, ಕೆ. ಬಸವಂತಪ್ಪ, ನಜರುದ್ದೀನ್ ಖಾದ್ರಿ, ಚಾಂದ್ ಪಾಷ, ಶೇಕ್ ಸತ್ತಾರ ಬಂಗ್ಲೆವಾಲೆ, ರಸೂಲ್ ಕುರುಶಿ, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಕರವೇ ಮನವಿ



ಯುವ ಮಾರ್ಗ ಸುದ್ದಿ

**ಮಾನ್ವಿ,ಆ.05**– ಪಟ್ಟಣದ ನಮಾಜಗೇರಿ ಗುಡ್ಡ ಹಾಗೂ ಯಂಕಪ್ಪ ತಾತನ ಮಠದವರೆಗೆ ವಾರ್ಡ್ ನಿವಾಸಿಗಳ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವಂತೆ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕ ಘಟಕ ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಕುಡಿಯುವ ನೀರಿನ ಬಗ್ಗೆ ವಾರ್ಡಿನ ನಿವಾಸಿಗಳು ಎರಡು ಮೂರು ಭಾರಿ ಮನವಿ ಸಲ್ಲಿಸಿದರೂ ಇದುವರೆಗೂ ಯಾವುದೇ ಕ್ರಮಕೈಗೊಂಡಿಲ್ಲ. ಹಾಗಾಗಿ ನಾಲ್ಕು ದಿನಗಳ ಒಳಗೆ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸದಿದ್ದರೆ ಪುರಸಭೆ ಮುತ್ತಿಗೆ ಹಾಗೂ ಪುರಸಭೆ ಆವರಣದಲ್ಲಿ ಅರೆಬೆತ್ತಲೆ ಸ್ನಾನ ಮತ್ತು ಬಟ್ಟೆ ಹೊಗೆಯುವುದು ಸೇರಿದಂತೆ ನಾನಾ ರೀತಿಯ ಪ್ರತಿಭಟನೆ ಮಾಡಲಾಗುವುದು ಮನವಿಯಲ್ಲಿ ಎಚ್ಚರಿಸಿದರು.

ಈ ಸಂದರ್ಭದಲ್ಲಿ ತಾಲೂಕ ಅಧ್ಯಕ್ಷ ನರಸಿಂಹ, ಪ್ರಧಾನ ಕಾರ್ಯದರ್ಶಿ ದೀಪಕ್ ಯಾದವ್, ನಗರ ಘಟಕ ಅಧ್ಯಕ್ಷ ಮಹೇಂದ್ರ ನಾಯಕ, ಸಂಜೀವ, ಬಾಲಯ್ಯ, ತಿಮ್ಮಯ್ಯ, ವಿಜಯ, ಹನುಮಂತ, ಮಲ್ಲು, ಮಲ್ಲಪ್ಪ, ಸಾಬಯ್ಯ, ರಮೇಶ, ರಾಜಾ ಇದ್ದರು.

## ಸಾರಿಗೆ ನೌಕರರ ಮುಷ್ಕರ : ಖಾಸಗಿ ವಾಹನಗಳ ಮೂಲಕ ಸಂಚರಿಸಿದ ಪ್ರಯಾಣಿಕರು




ಯುವ ಮಾರ್ಗ ಸುದ್ದಿ

**ಮಾನ್ವಿ,ಆ.05**–ಸಾರಿಗೆ ನೌಕರರು 38 ತಿಂಗಳ ಹಿಂಬಾಕಿ ಜತೆ ವೇತನ ಪರಿಷ್ಕರಣೆ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮಂಗಳವಾರ ಮಾನ್ವಿ ಸಾರಿಗೆ ನೌಕರರು ಮುಷ್ಕರದಲ್ಲಿ ಪಾಲ್ಗೊಂಡಿದರಿಂದ ಬಸ್ ಸಂಚಾರಕ್ಕೆ ತೊಂದ ರೆಯಾಯಿತು

ಮುಷ್ಕರ ಇರುವುದರ ಬಗ್ಗೆ ಮಾಹಿತಿ ಇಲ್ಲದೆ ಆಗಮಿಸಿದ ಗ್ರಾಮೀಣ ಜನರು ಮರಳಿ ತಮ್ಮ ಗ್ರಾಮಗಳನ್ನು ಸೇರಿಕೊಂಡರು .ಬಸ್ ನಿಲ್ದಾಣದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ ಮಹಿಳಾ ಪ್ರಯಾಣಿಕರನ್ನು ಅವರ ಗ್ರಾಮಗಳಿಗೆ ಸಾರಿಗೆ ಬಸ್‌ಗಳಲ್ಲಿ ಕಳುಹಿಸಲಾಯಿತು. ಮಾನ್ವಿ ಸಾರಿಗೆ ಡಿಪೋ ವ್ಯವಸ್ಥಾಪಕರಾದ ನಾಗರಾಜ ಮಾತನಾಡಿ ಮಾನ್ವಿ ಘಟಕದಿಂದ ಒಟ್ಟು 46 ಮಾರ್ಗಗಳಿಗೆ ಬಸ್ ಸಂಚಾರವಿದ್ದು 49 ಬಸ್‌ಗಳು ನಿತ್ಯ ಸಂಚಾರ ನಡೆಸುತ್ತವೆ ಮುಷ್ಕರ ಹಿನ್ನೆಲೆಯಲ್ಲಿ ಸಾಮಾನ್ಯ ಹಾಗೂ ವೇಗದೂತ ಮಾರ್ಗಗಳಲ್ಲಿ ಚಾಲಕರು ಹಾಗೂ ನಿರ್ವಾಹಕರ ಮನವೊಲಿಸಿ ಮಂಗಳವಾರ ತಾಲೂಕಿನ ಮಾನ್ವಿ ಮತ್ತು ಸಿರವಾರ ತಾಲೂ ಕುಗಳ ಸಾಮಾನ್ಯ ಮಾರ್ಗಗಳಲ್ಲಿ ಸಂಚಾ ರಕ್ಕೆ ಅಗತ್ಯ ವ್ಯವಸ್ಥೆ ಮಾಡಿದ್ದೇವೆ. ಅಂತರಾಜ್ಯ ಹಾಗೂ ವಿವಿಧ ಜಿಲ್ಲೆಗಳಲ್ಲಿ ಸಂಚರಿಸುವ 20 ಕ್ಕೂ ಹೆಚ್ಚು ವೇಗದೂತ ಬಸ್‌ಗ ಳ ಸಂಚಾರಕ್ಕು ಕ್ರಮ ಕೈಗೊಳ್ಳಲಾಗಿದೆ ಪ್ರಯಾಣಿಕರ ಬೇಡಿಕೆ ಹೆಚ್ಚಿರುವ ಮಾರ್ಗ ಗಳಲ್ಲಿ ಹೆಚ್ಚಿನ ಬಸ್ ಸಂಚಾರಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು

ರಾಯಚೂರು ಪ್ರದೇಶಿಕ ಸಾರಿಗೆ ಇಲಾಖೆಯ ಅಧಿಕಾರಿ ರಾಜೇಶ.ಎನ್. ಮಾತನಾಡಿ ಸಾರಿಗೆ ಇಲಾಖೆಯ ನೌಕರರ ಮುಷ್ಕರ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಖಾಸಗಿ ಮಾಹನಗಳ ಮೂಲಕ ಸಂಚಾರಕ್ಕೆ ಅವಕಾಶ ಮಾಡಿಕೊಡಲಾಗಿದ್ದು ಖಾಸಗಿ ವಾಹನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಕರನ್ನು ಕೂಡಿಸದಂತೆ ಹಾಗೂ ಹೆಚ್ಚಿನ ಹಣ ಪಡೆಯದಂತೆ ಕಟ್ಟು ನಿಟ್ಟಿನ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

## ಗುಣಮಟ್ಟದ ಶೂ, ಸಾಕ್ಸ್ ವಿತರಣೆ ಮಾಡಲು ದಲಿತ ರಕ್ಷಣಾ ವೇದಿಕೆ ಒತ್ತಾಯ

ಯುವ ಮಾರ್ಗ ಸುದ್ದಿ

**ಮಾನ್ವಿ,ಆ.05**–ಮಾನ್ವಿ ಮತ್ತು ಸಿರವಾರ ತಾಲೂಕುಗಳ ಸರ್ಕಾರಿ ಶಾಲೆಗಳಲ್ಲಿ ವಿದ್ಯಾವಿಕಾಶ ಯೋಜನೆಯಡಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶೂ ಮತ್ತು ಸಾಕ್ಸ್ ನೀಡುವಂತೆ ಕರ್ನಾಟಕ ದಲಿತ ರಕ್ಷಣಾ ವೇದಿಕೆ(ರಿ) ಜಿಲ್ಲಾ ಸಮಿತಿ ರಾಯಚೂರು, ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಮಾಡಿದೆ.

ಕಳಪೆ ಗುಣಮಟ್ಟದ ಶೂ ಮತ್ತು ಸಾಕ್ಸ್ ಖರೀದಿಸುವ ಶಾಲೆಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದೆ.

ಪ್ರತಿ ವರ್ಷ ಸರ್ಕಾರವು ಸರ್ಕಾರಿ ಶಾಲೆಗಳ 1 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಶೂ ಮತ್ತು ಸಾಕ್ಸ್ ಖರೀದಿಸಲು ಅನುದಾನ ನೀಡುತ್ತಿದೆ. ಆದರೆ ಕೆಲವು ಶಾಲೆಗಳಲ್ಲಿ ಕಳಪೆ ಗುಣಮಟ್ಟದ ವಸ್ತುಗಳನ್ನು ಖರೀದಿಸಿ ಸರ್ಕಾರದ ಹಣ ಪೋಲು ಮಾಡಲಾಗುತ್ತಿದೆ ಎಂದು ಸಂಘಟನೆ ಆರೋಪಿಸಿದೆ. ಇದರಿಂದ ಮಕ್ಕಳಿಗೆ ಕೇವಲ ಕೆಲವು ತಿಂಗಳುಗಳಲ್ಲಿ ಶೂ ಮತ್ತು



ಸಾಕ್ಸ್ ಹರಿದು ಹೋಗಿ, ಬರಿಗಾಲಿನಲ್ಲಿ ಶಾಲೆಗೆ ಬರುವಂತಾಗಿದೆ.

2025–26ನೇ ಸಾಲಿನಲ್ಲಿ ಈ ಸಮಸ್ಯೆಯನ್ನು ತಡೆಯಲು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುಂಜಾಗ್ರತಾ ಕ್ರಮವಾಗಿ ಎಲ್ಲಾ ಶಾಲೆಗಳಿಗೆ ಕಟ್ಟುನಿಟ್ಟಿನ ಆದೇಶ ಹೊರಡಿಸಬೇಕು. ಸರ್ಕಾರದ ಸುತ್ತೋಲೆ ಸಂಖ್ಯೆ: ಇಪಿ54 ಎಂಪಿಇ–2025 ಬೆಂಗಳೂರು ದಿ:21–06–2025 ರ ಪ್ರಕಾರ, ಉತ್ತಮ ಗುಣಮಟ್ಟದ ಮತ್ತು ಐ.ಎಸ್.ಐ ಮಾರ್ಕಿನ ಶೂ ಮತ್ತು ಸಾಕ್ಸ್ ಖರೀದಿಸುವಂತೆ ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಎಸ್.ಡಿ.ಎಂ.ಸಿ ಅಧ್ಯಕ್ಷರಿಗೆ ಸೂಚನೆ ನೀಡಬೇಕು ಎಂದು ಸಂಘಟನೆ ಒತ್ತಾಯಿಸಿದೆ.

ಕರ್ನಾಟಕ ದಲಿತ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷರಾದ ಕಾಶಿನಾಥ ಕುರುಡಿ, ದಲಿತ ಮುಖಂಡರಾದ ತಿಪ್ಪಣ್ಣ ಜಾನೇಕಲ್, ರಮೇಶ್ ನಾಯಕ್ ಕಪಗಲ್, ಹನುಮಂತ ಬೈಲ್ ಮರ್ಚೆಡ್, ಹನುಮಂತು ಸಾದಾಪುರ್ ಮತ್ತು ಷಣ್ಮುಖಪ್ಪ ನೀರಮಾನ್ವಿ ಅವರು ಈ ಮನವಿಯನ್ನು ಸಲ್ಲಿಸಿದ್ದಾರೆ

## ಮೊದಲನೇಯ ಪುಟದಿಂದ

# ಹೈಕೋರ್ಟ್ ಎಚ್ಚರಿಕೆ ಹಿನ್ನೆಲೆಯಲ್ಲಿ ಮುಷ್ಕರ ಹಿಂಪಡೆದ ಸಾರಿಗೆ ನೌಕರರು

ಬಳಿಕ ಸಾರಿಗೆ ಸಂಘಟನೆಗಳ ಪರ ವಕೀಲರನ್ನ ಹೈಕೋರ್ಟ್ ತರಾಟೆಗೆ ತೆಗೆದುಕೊಂಡಿತು. ಎಸ್ಮಾ ಕಾಯ್ದೆ ಉಲ್ಲಂಘನೆ ಆರೋಪದಲ್ಲಿ ಜಂಟಿ ಕ್ರಿಯಾ ಸಮಿತಿ ಪದಾಧಿಕಾರಿಗಳನ್ನು ಬಂಧಿಸುವ ಆದೇಶ ನೀಡಬೇಕಾದಿತು ಎಂದು ಎಚ್ಚರಿಕೆ ನೀಡಿತು.ಮುಷ್ಕರದಿಂದ ಜನಸಾಮಾನ್ಯರಿಗೆ ತೊಂದರೆಯಾಗಿದೆ ಎಂದು ಕೋರ್ಟ್ ಗೆ ಎಜಿ ಹೇಳಿದರು. ರಾಜಿ ಸಂಧಾನದ ಮಾತುಕತೆ ಏನಾಗಿದೆ ಎಂದು ಪೀಠ ಪ್ರಶ್ನೆ ಮಾಡಿದಾಗ ಇಲ್ಲಿಯವರೆಗೆ ನಡೆದ ಮಾತುಕತೆಗಳ ವಿವರ ನೀಡಿದರು.

ಸಮಸ್ಯೆ ಇದ್ದರೆ ಸರ್ಕಾರದೊಂದಿಗೆ ಚರ್ಚಿಸಿ ಬಗೆಹರಿಸಿಕೊಳ್ಳಿ. ಜನಸಾಮಾನ್ಯರನ್ನು ಒತ್ತೆಯಾಗಿರಿಸುವುದನ್ನು ಸಹಿಸುವುದಿಲ್ಲ. ಎಸ್ಮಾ ಜಾರಿಯಾದರೂ ಮುಷ್ಕರ ನಡೆಸುವುದು ಕಾನೂನುಬಾಹಿರ ಎಂದ ಪೀಠ, ನಾಲ್ಕು ಸಾರಿಗೆ ನಿಗಮಗಳ ನೌಕರರ ಸಂಘಕ್ಕೆ ನೋಟಿಸ್ ನೀಡಿತು. ಹೈಕೋರ್ಟ್ ತರಾಟೆಗೆ ತಬ್ಬಿಬ್ಬಾದ ಜಂಟಿ ಕ್ರಿಯಾ ಸಮಿತಿ ಪರ ವಕೀಲರು ಮುಷ್ಕರ ನಡೆಸುವುದಿಲ್ಲ ಎಂದು ಪೀಠದ ಮುಂದೆ ಹೇಳಿದರು.

ಮುಷ್ಕರ ನಿಲ್ಲಿಸಿರುವ ಬಗ್ಗೆ ಬುಧವಾರ ಕೋರ್ಟ್ ಗೆ ಪ್ರಮಾಣಪತ್ರ ಸಲ್ಲಿಸಬೇಕು, ಎಸ್ಮಾ ಕಾಯ್ದೆ ಉಲ್ಲಂಘಿಸಿದರೆ ಸರ್ಕಾರ ಕ್ರಮ ಕೈಗೊಳ್ಳಬಹುದು ಎಂದು ಹೇಳಿದ ಹೈಕೋರ್ಟ್, ಮುಷ್ಕರ ನಡೆಸದಂತೆ ಸೋಮವಾರ ನೀಡಿದ್ದ ಮಧ್ಯಂತರ ಆದೇಶವನ್ನು ಎರಡು ದಿನ ವಿಸ್ತರಿಸಿದೆ. ವಿಚಾರಣೆಯನ್ನು ಆಗಸ್ಟ್ 7ಕ್ಕೆ ಮುಂದೂಡಲಾಗಿದೆ.

ಬೇಡಿಕೆಗೆ ಬಗ್ಗದ ಸರ್ಕಾರ

ವೇತನ ಹಿಂಬಾಕಿ, ಸಂಬಳ ಹೆಚ್ಚಳ ಸೇರಿದಂತೆ ನಾನಾ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಕೆಎಸ್ಆರ್‌ಟಿಸಿ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಇಂದಿನಿಂದ ಮುಷ್ಕರಕ್ಕೆ ಕರೆ ನೀಡಲಾಗಿತ್ತು. 1800 ಕೋಟಿ ಹಿಂಬಾಕಿ, ಕೋಟ್ಯಾಂತರ ರುಪಾಯಿ ಪಿಎಫ್ ಬಾಕಿ, ವೇತನ ಹೆಚ್ಚಳ ಸೇರಿದಂತೆ ಹತ್ತಾರು ಬೇಡಿಕೆಗಳನ್ನು ಸರ್ಕಾರದ ಮುಂದೆ ಇಡಲಾಗಿದೆ. ಆದರೆ ಹಿಂಬಾಕಿ ಕೊಡಲು ಸರ್ಕಾರ ಒಪ್ಪದಿದ್ದ ಕಾರಣ, ಸಭೆಯಲ್ಲಿ ಒಮ್ಮತದ ನಿರ್ಧಾರಕ್ಕೆ ಬಂದಿರಲಿಲ್ಲ. ಹೀಗಾಗಿ ಮುಷ್ಕರಕ್ಕೆ ಕರೆ ನೀಡಲಾಗಿತ್ತು. ಈ ಬೆನ್ನಲ್ಲೇ ನೌಕರರ ಮುಷ್ಕರವನ್ನು 1 ದಿನ ತಡೆ ಹಿಡಿಯುವಂತೆ ಹೈಕೋರ್ಟ್ ಸೂಚನೆ ನೀಡಿತ್ತು. ಆದ್ರೆ ಕೋರ್ಟ್ ಆದೇಶ ಪ್ರತಿ ಕೈಸೇರಿಲ್ಲ ಅಂತ ಹೇಳಿ ಜಂಟಿ ಕ್ರಿಯಾ ಸಮಿತಿ ಮುಷ್ಕರಕ್ಕೆ ಧುಮುಕಿತ್ತು.

ಸಾರಿಗೆ ಸಿಬ್ಬಂದಿ ಕೆಲಸಕ್ಕೆ ಹಾಜರಾಗಿ: ಅನಂತ ಸುಬ್ಬರಾವ್?

ಹೈಕೋರ್ಟ್? ತರಾಟೆಗೆ ತೆಗೆದುಕೊಂಡ ಬೆನ್ನಲ್ಲೇ ಸಾರಿಗೆ ನೌಕರರು ಮುಷ್ಕರವನ್ನು ಮುಂದೂಡಿದರು. ಸಾರಿಗೆ ಸಿಬ್ಬಂದಿ ಮುಷ್ಕರ ಮುಂದೂಡಿದ್ದೇವೆ. ಸಾರಿಗೆ ಸಿಬ್ಬಂದಿ ಎಲ್ಲರೂ ಈ ಕ್ಷಣದಿಂದಲೇ ಕರ್ತವ್ಯಕ್ಕೆ ಹಾಜರಾಗಿ ಎಂದು ಜಂಟಿ ಕ್ರಿಯಾ ಸಮಿತಿ ಅಧ್ಯಕ್ಷ ಅನಂತ ಸುಬ್ಬರಾವ್ ಹೇಳಿದರು.

# ನಂದವಾಡಗಿ ಏತ ನೀರಾವರಿ ಕಾಮಗಾರಿ ಪೂರ್ಣಗೊಳಿಸಿ : ಬಸವಂತರಾಯ ಕುರಿ

ಮಾಡುತ್ತಿದೆ ಎಂದು ಆರೋಪಿಸಿದರು. ಈಗಾಗಲೆ ನಂದವಾಡಗಿ ಏತ ನೀರಾವರಿ ಹೋರಾಟ ಸಮಿತಿ ಹೇಕ್ಟೇರ್‌ಗೆ ಒಂದು ತೂಬು ಮೂಲಕ ನೀರು ಕೊಟ್ಟು ಕೃಷಿ ಹೊಂಡ ನಿರ್ಮಿಸಿ ಸೋಲಾರ ಪಂಪ್‌ಸೆಟ್ಗಳು ನೀಡಬೇಕು. ಇದೆಲ್ಲ ಈಗ ಮೀಸಲಿಟ್ಟಿರುವ ಅನುದಾನದಲ್ಲಿ ಮುಗಿಯುತ್ತದೆ. ಬಹಳ ಪ್ರಮುಖವಾಗಿ ನಂದವಾಡಗಿ ಏತ ನೀರಾವರಿ ಯೋಜನೆಗೆ ನೀರು ಹಂಚಿಕೆ, ಅನುದಾನ, ವಿವಾದಂತಹ ಯಾವುದೇ ಸಮಸ್ಯೆಗಳಿಲ್ಲ. ಆದರೂ ಸರ್ಕಾರ ಯೋಜನೆ ಕಾಮಗಾರಿ ತ್ವರಿತಗೊಳಿಸದೇ ಇರುವುದು ಈ ಭಾಗದ ರೈತರಿಗೆ ದೌರ್ಭಾಗ್ಯವಾಗಿದೆ.

ಕೂಡಲೇ ಮುಖ್ಯಮಂತ್ರಿಗಳು ನಂದವಾಡಗಿ ಏತ ನೀರಾವರಿ ಯೋಜನೆ ಕಾಮಗಾರಿ ಪೂರ್ಣಗೊಳಸಿಬೇಕು ಇಲ್ಲದೇ ಹೋದರೆ ಯೋಜನೆ ವ್ಯಾಪ್ತಿಯ ರೈತರೊಂದಿಗೆ ಬೃಹತ್ ಹೋರಾಟ ರೂಪಸಿಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ನಂದವಾಡಗಿ ಏತ ನೀರಾವರಿ ಹೋರಾಟ ಸಮಿತಿ ಅಧ್ಯಕ್ಷ ಸಿದ್ದರಾಮಪ್ಪ ಸಾಹುಕಾರ, ಪ್ರದಾನ ಕಾರ್ಯದರ್ಶಿ ಶರಣಗೌಡ ಬಸಾಪುರ, ರಮೇಶ ಶಾಸ್ತ್ರಿ, ಮಲ್ಲೇಶಗೌಡ ಮಟ್ಟೂರು, ಮೈಬುಸಾಬ್, ಗುರುನಾಥರೆಡ್ಡಿ ಸೇರಿದಂತೆ ಇದ್ದರು.

# ವೀರಶೈವ ಲಿಂಗಾಯತ ಧರ್ಮ ಎಲ್ಲರಿಗೂ ಪ್ರೀತಿಸುವ, ಗೌರವಿಸುವ ಧರ್ಮ: ದಾರುಕಲಿಂಗ ಶಿವಾಚಾರ್ಯ

**ಔರಾದ್.ಅ.05–**ವೀರಶೈವ ಲಿಂಗಾಯತ ಧರ್ಮ ಎಲ್ಲರನ್ನೂ ಪ್ರೀತಿಸುವ ಎಲ್ಲರನ್ನೂ ಅಪ್ಪಿಕೊಂಡು ಎಲ್ಲಾ ತತ್ವಗಳನ್ನು ಗೌರವಿಸುವ ವಿಶಿಷ್ಟ ಪರಂಪರೆ ನಮ್ಮದು ಎಂದು ಹೇಡಗಾಪೂರ ಶ್ರೀಮಠದ ದಾರುಕಲಿಂಗ ಶಿವಾಚಾರ್ಯರು ಹೇಳಿದರು.

ತೆಲಂಗಾಣದ ಹೈದ್ರಾಬಾದ್ ಮಹಾನಗರದ ಅಮ್ಮರಪೇಟ್ ಕಾಲೋನಿಯಲ್ಲಿ ವೀರಶೈವ ಲಿಂಗಾಯತ ಸಂಘಟನೆ ವತಿಯಿಂದ ಲಿಂಗದೀಕ್ಷೆ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು ಪ್ರತಿಯೊಬ್ಬ ವೀರಶೈವರು ಲಿಂಗ ಧಾರಣೆ ಮಾಡಿಕೊಳ್ಳಬೇಕು ಎಂದು ಹೇಳಿ ಎಲ್ಲರಿಗೂ ಲಿಂಗ ದೀಕ್ಷೆ ಮಂತ್ರೋಪದೇಶ ನೀಡಿ ಆಶೀರ್ವಚನ ನೀಡಿದರು.

ನೇತೃತ್ವ ವಹಿಸಿದ್ದ ಕಮ್ಮಡೊಳ್ಳಿಯ ಶ್ರೀಮಠದ ಅಭಿನವ ರಾಚೋಟೇಶ್ವರ ಶ್ರೀಗಳು ಮಾತನಾಡಿ ನಾವು ಮಕ್ಕಳಿಗೆ ಒಳ್ಳೆಯ ಸಂಸ್ಕಾರ ವನ್ನು ನೀಡಬೇಕು, ನಾವು ತಂದೆ ತಾಯಿಗಳು ಮಕ್ಕಳಿಗೆ ಒಳ್ಳೆ ಮಾರ್ಗದರ್ಶನ ಮಾಡಿದರೆ ಅವರು ಬದುಕು ಸುಂದರವಾಗುವುದು ಮೂರು ವರ್ಷದ ಬುದ್ದಿ ನೂರು ವರ್ಷ ತನಕ ಎನ್ನುವ ಹಾಗೇ ಬಾಲ್ಯ ದಲ್ಲಿಯೇ ಒಳ್ಳೆ ಪರಿಪಾಠ



ಹಾಕಬೇಕು ಎಂದು ಹೇಳಿದರು. ಈ ವೇಳೆ

ಐವತ್ತಕ್ಕು ಹೆಚ್ಚು ಜನರು ಲಿಂಗದಿಕ್ಷೆ ಧಾರಣೆ ಮಾಡಿದರು.

ಈ ಸಂದರ್ಭದಲ್ಲಿ ಎಸ್.ಸಂಜುಕುಮಾರ್, ಸಂತೋಷ ಜನವಾಡೆ, ಶ್ರೀಕಾಂತ್ ಕುಡತೆ, ಮಲ್ಲಿಕಾರ್ಜುನ ಶೆಂಬೆಳ್ಳೆ, ಶಿವಾ ಬಿರಾದಾರ್, ಲೋಕೇಶ ಪಾಟೀಲ, ಆನಂದ ಗೌಡ, ಶ್ರೀಕಾಂತ್ ಸ್ವಾಮಿ, ವಿಜಯಕುಮಾರ, ಉಪೇಂದ್ರ, ಸಂತೋಷ್ ಹಾಗೂ ಇತರರಿದ್ದರು.

# ವರ್ಗಾವಣೆಗೊಂಡ ಆರೋಗ್ಯ ಇಲಾಖೆಯ ನೌಕರರಿಗೆ ಬೀಳ್ಕೊಡುಗೆ ಹಾಗೂ ಅಭಿನಂದನೆ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.05–** ತಾಲೂಕಿನ ಪೋತ್ನಾಳ್ ಗ್ರಾಮದಲ್ಲಿನ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ವರ್ಗಾವಣೆಗೊಂಡ ಆರೋಗ್ಯ ಇಲಾಖೆಯ ನೌಕರರಿಗಾಗಿ ಹಮ್ಮಿಕೊಂಡ ಬೀಳ್ಕೊಡುಗೆ ಹಾಗೂ ಅಭಿನಂದನ ಸಮಾರಂಭದಲ್ಲಿ ವರ್ಗಾವಣೆಯಾದ ಸಿಬ್ಬಂದಿಗಳನ್ನು ಸನ್ಮಾನಿಸಿ ತಾಲೂಕು ಆರೋಗ್ಯಧಿಕಾರಿ ಡಾ.ಶರಣ ಬಸವರಾಜ ಮಾತನಾಡಿ, ತಾಲೂಕಿನ ಆರೋಗ್ಯ ಇಲಾಖೆಯಲ್ಲಿ ಉತ್ತಮವಾಗಿ ಸೇವೆ ಸಲ್ಲಿಸಿದ 6 ಆರೋಗ್ಯ ಸಿಬ್ಬಂದಿಗಳು ಸರ್ಕಾರದ ನಿಯಮದಂತೆ ವರ್ಗವಣೆ ಹೊಂದಿದ್ದಾರೆ ಅವರು ತಾವು ಸೇವೆ ಸಲ್ಲಿಸುವ ಸ್ಥಳದಲ್ಲಿಯು ಕೂಡ ಇನ್ನೂ ಉತ್ತಮವಾದ ಸೇವೆಯನ್ನು ಸಲ್ಲಿಸಲಿ ಎಂದು ತಿಳಿಸಿ



ದರು.ಪೋತ್ನಾಳ್ ಆರೋಗ್ಯ ಕೇಂದ್ರದಿಂದ ವರ್ಗಾವಣೆ ಹೊಂದಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ, ನೇತ್ರ ಅಧಿಕಾರಿ ಯಲ್ಲಪ್ಪ, ಸಾರ್ವಜನಿಕ ಆಸ್ಪತ್ರೆ ಮಾನ್ವಿ ಫಾರ್ಮಸಿಸ್ಟ್ ಅಧಿಕಾರಿ ರವಿಚಂದ್ರನ್, ಆರೋಗ್ಯ ನಿರೀಕ್ಷಣಾಧಿಕಾರಿ ದೇವೇಂದ್ರಪ್ಪ, ಆರೋಗ್ಯ ನಿರೀಕ್ಷಣಾ ಅಧಿಕಾರಿ ಚಂದ್ರಕಲಾ. ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿ ಚೈತ್ರಾ ರವರನ್ನು ಆರೋಗ್ಯ ಇಲಾಖೆಯಿಂದ ಸನ್ಮಾನಿಸಿ ಬೀಳ್ಕೊಡಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಚಂದ್ರಶೇಖರಯ್ಯ ಸ್ವಾಮಿ, ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ. ಹನುಮೇಶ ನಾಯಕ, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಗುರುನಾಥ್ ರೆಡ್ಡಿ , ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶರಣಪ್ಪ ,ವಿಶ್ವರಾಧ್ಯ,ಗುರುಶರಣ , ಶೃತಿ, .ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಪವಿತ್ರಾ ಸೇರಿದಂತೆ ಗ್ರಾಮದ ಮುಖಂಡರಾದ ಚಿನ್ನಪ್ಪ, ಈರಣ್ಣ, ಆರೋಗ್ಯ ಕೇಂದ್ರದ ಸಿಬ್ಬಂದಿಗಳು ,ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಇದ್ದರು.

# ಉದ್ಭವಲಿಂಗ ಅಮರೇಶ್ವರ ದೇವಸ್ಥಾನ ಅಭಿವೃದ್ಧಿಗೆ 1ಕೋಟಿ ಅನುದಾನ



**ಔರಾದ್,ಆ.05–**ಪಟ್ಟಣದ ಐತಿಹಾಸಿಕ ಪ್ರಸಿದ್ಧಿ ಪಡೆದ ಉದ್ಭವಲಿಂಗ ಶ್ರೀ ಅಮರೇಶ್ವರ ದೇವಸ್ಥಾನದ ಮಹಾದ್ವಾರ ನಿರ್ಮಾಣ ಹಾಗೂ ದೇವಸ್ಥಾನ ಅಭಿವೃದ್ಧಿಗೆ ಸಂಸದರ ನಿಧಿಯಿಂದ 1ಕೋಟಿ ರೂಪಾಯಿ ನೀಡುವುದಾಗಿ ಸಂಸದ ಸಾಗರ ಖಂಡ್ರೆ ಹೇಳಿದರು.

ಸೋಮವಾರ ದೇವಸ್ಥಾನಕ್ಕೆ ಭೇಟಿ ನೀಡಿ ಉದ್ಭವಲಿಂಗ ಶ್ರೀ ಅಮರೇಶ್ವರ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಮಾತನಾಡಿದ ಅವರು ದೇವಸ್ಥಾನದ ಅಭಿವೃದ್ಧಿಗೆ ಸದಾ ಬದ್ಧನಾಗಿರುವೆ ಈಗಾಗಲೇ ಬಹಳಷ್ಟು ಜನರು ದೇವಸ್ಥಾನದ ಕುರಿತು ಹತ್ತು ಹಲವು ಸಮಸ್ಯೆಗಳ ಬಗ್ಗೆ ತಿಳಿಸಿದ್ದಾರೆ, ಅದರಂತೆ ಹಲವು ದಶಕಗಳಿಂದ ನೆನೆಗುದಿಗೆ ಬಿದ್ದಿರುವ ಮಹಾದ್ವಾರ ನಿರ್ಮಾಣ ಕನಸಾಗಿಯೆ ಉಳಿದಿದೆ, ಹಳೆಯ ಗೋಡೆಯ ಬೀಳುವ ಹಂತಕ್ಕೆ ತಲುಪಿದೆ. ಶೀಘ್ರವೇ ಕಾಮಗಾರಿ ಕೈಗೆತ್ತಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ತಿಳಿಸಿದರು.

ಈ ಮುಂಚೆಯು ಸಹ ಮಾನ್ಯ ಶಾಸಕರು, ಸಂಸದರು ಮಹಾದ್ವಾರ ನಿರ್ಮಾಣ ಮಾಡುವುದಾಗಿ ಹೇಳಿ ಗುದ್ದಲಿ ಪೂಜೆ ನೆರವೇರಿಸಿ ಹೋಗಿದ್ದಾರೆ, ವರ್ಷಗಳೇ ಕಳೆದರೂ ಯಾವುದೇ ಕಾಮಗಾರಿ ಶುರುವಾಗಿಲ್ಲ, ಭಕ್ತರು ಜನಪ್ರತಿನಿಧಿಗಳ ಹಾಗೂ ಅಧಿಕಾರಿಗಳ ವಿರುದ್ಧ ಬೇಸರ ವ್ಯಕ್ತಪಡಿಸುತ್ತಿದ್ದಾರೆ, ಮುಂದೆಯೂ ಸಹ ಇದೇ ರೀತಿ ಆಗಬಹುದೆ ಎಂದು ಕೇಳಿದ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು ಈ ಹಿಂದೆ ಎನ್ ಆಗಿದೆಯೆ ಅದನ್ನು ನಾನು ಪ್ರಶ್ನೆ ಮಾಡುವುದಿಲ್ಲ ಈಗ ನಾನು ಆಶ್ವಾಸನೆ ನೀಡಿದ ಹಾಗೆ ಶೀಘ್ರವೇ ಕಾಮಗಾರಿ ಕೈಗೊಂಡು ದೇವಸ್ಥಾನದ ಮಹಾದ್ವಾರ, ಸೇರಿದಂತೆ ಅಗತ್ಯವಿರುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸೂಚಿಸುತ್ತೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ಮಹೇಶ ಪಾಟೀಲ, ತಾಪಂ ಇಒ ಶಿವಕುಮಾರ ಘಾಟೆ, ಬಸವರಾಜ ದೇಶಮುಖ, ಸುನೀಲಕುಮಾರ ದೇಶಮುಖ, ಶರಣಪ್ಪ ಪಾಟೀಲ, ರಾಜಕುಮಾರ ಎಡವೆ, ಅನಿಲ ನಿರ್ಮಳೆ, ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

101 ತೆಂಗಿನ ಕಾಯಿ ಒಡೆದು ಹರಕೆ ತೀರಿಸಿದ ಖಂಡ್ರೆ ಅಭಿಮಾನಿ

ಸಾಗರ ಖಂಡ್ರೆ ಅವರು ಸಂಸದರಾದರೆ ಅಮರೇಶ್ವರ ದೇವರಿಗೆ 101 ತೆಂಗಿನಕಾಯಿ ಒಡೆಯುವೆ ಎಂದು ಹರಕೆ ಇಟ್ಟಿದ್ದ ಖಂಡ್ರೆ ಅಭಿಮಾನಿ ಅನಿಲ ನಿರ್ಮಳೆ ಅವರು ಶ್ರಾವಣ ಮಾಸದ ಎರಡನೇ ಸೋಮವಾರ ಪಟ್ಟಣದ ಉದ್ಭವಲಿಂಗ ಶ್ರೀ ಅಮರೇಶ್ವರ ದೇವಸ್ಥಾನಕ್ಕೆ ಆಗಮಿಸಿದ ಸಂಸದ ಸಾಗರ ಖಂಡ್ರೆ ಅವರ ಸಮ್ಮುಖದಲ್ಲಿ 101 ಕಾಯಿ ಒಡೆದು ಹರಕೆ ತೀರಿಸಿ ಸಾರ್ವಜನಿಕರಿಗೆ ಸಿಹಿ ತಿನ್ನಿಸಿ ಗಮನ ಸೆಳೆದರು.

## ಕೃಷಿ ವಿಜ್ಞಾನಿಗಳಿಂದ ಪರಿಶೀಲನೆ

# ಸೂರ್ಯಕಾಂತಿ ಬೆಳೆಗೆ ತೆನೆ ತಿನ್ನುವ ಕೀಟಾದ ಹಾವಳಿ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.05–**ತಾಲೂಕಿನ ಖರಾಬದಿನ್ನಿ,ಮುದ್ದಂಗುಡ್ಡಿ, ತಡಕಲ್, ಜಿನ್ನೂರು, ದೇವಿಪುರ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ರೈತರು ಮುಂಗಾರಿನಲ್ಲಿ ಸೂರ್ಯಕಾಂತಿ ಬೆಳೆಯನ್ನು ಬೆಳೆದಿದ್ದು ಸೂರ್ಯಕಾಂತಿ ಬೆಳೆಯಲ್ಲಿ ತೆನೆಗಳನ್ನು ತಿನ್ನುವ ಹೆಲಿಕೋವರ್ಪಾ ಆರ್ಮಿಜೆರಾ ಕೀಟದ ಹಾವಳಿ ಕಂಡು ಬಂದಿದೆ ಈ ಕೀಟಗಳು ಕಾಳು ಕಟ್ಟುವ ಹಂತದಲ್ಲಿನ ಸೂರ್ಯಕಾಂತಿ ಹೂವುಗಳನ್ನು ತಿನ್ನುವ ಮೂಲಕ ರೈತರಿಗೆ ಹೆಚ್ಚಿನ ನಷ್ಟವನ್ನು ಉಂಟುಮಾಡುತ್ತಿವೆ. ರಾಯಚೂರು ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳ ತಂಡ ಮಾನ್ವಿ ತಾಲೂಕಿನ ವಿವಿಧ ಗ್ರಾಮಗಳಲ್ಲಿನ ರೈತರ ಜಮೀನಿನಲ್ಲಿ ಬೆಳೆದಿರುವ ಸೂರ್ಯಕಾಂತಿ ಬೆಳೆಯನ್ನು ಪರಿಶೀಲಿಸಿದರು.

ಮಾನ್ವಿ ತಾಲೂಕಿನ ವಿವಿಧ ಗ್ರಾಮಗಳಲ್ಲಿ ರೈತರು ಈ ಬಾರಿ ಹೆಚ್ಚಿನ ಪ್ರಮಾಣದಲ್ಲಿ ಸೂರ್ಯಕಾಂತಿ ಬೆಳೆಯನ್ನು ಬೆಳೆದಿದ್ದು ಸೂರ್ಯಕಾಂತಿ ಬೆಳೆ ಮೊಗ್ಗು ಬರುವ



ಹಂತದಿಂದ ಕಾಳು ಕಟ್ಟುವ ಹಂತದವರೆಗಿದ್ದು ಬಲಿಯುತ್ತಿರುವ ಸೂರ್ಯಕಾಂತಿಯ ಕಾಳುಗಳನ್ನು ತೆನೆಗಳನ್ನು ತಿನ್ನುವ ಹೆಲಿಕೋವರ್ಪಾ ಆರ್ಮಿಜೆರಾ ಕೀಟಗಳು ತಿಂದು ನಾಶಮಾಡುತ್ತಿದ್ದು ರೈತರಿಗೆ ನಷ್ಟವನ್ನುಂಟು ಮಾಡುತ್ತಿವೆ. ತೆನೆಗಳನ್ನು ತಿನ್ನುವ ಹೆಲಿಕೋವರ್ಪಾ ಆರ್ಮಿಜೆರಾ ಕೀಟಗಳನ್ನು ನಿಯಂತ್ರಿಸುವುದಕ್ಕೆ ರೈತರು ಸೂರ್ಯಕಾಂತಿಯಲ್ಲಿ ಮೊಗ್ಗು ಬರುವ ಸಮಯದಲ್ಲಿ ಪ್ರಾಥಮಿಕವಾಗಿ ಜೈವಿಕ ಕೀಟನಾಶಕವಾದ ಹೆಚ್.ಎ.ಎನ್.ಪಿ.ವಿ 100 ಎಲ್.ಇ ಅನ್ನು ಸಿಂಪರಣೆ ಮಾಡಬೇಕು. ಕಾಳು ಕಟ್ಟುವ ಹಂತದಲ್ಲಿ ಸೈಪರಮಿತ್ರಿನ್ 10 ಇ.ಸಿ ಒಂದು ಲೀಟರ್ ನೀರಿಗೆ 1 ಮಿ.ಲೀ ಅಥವಾ ಲ್ಯಾಂಬ್ಡಾ ಸೈಹೆಲೊತ್ರಿನ್ 5 % ಇ.ಸಿ ಒಂದು ಲೀಟರ್ ನೀರಿಗೆ 0.5 ಮಿ.ಲೀ ಅಥವಾ ಇಂಡಾಕ್ಸಾಕಾರ್ಬ 14.5 ಎಸ್.ಸಿ ಒಂದು ಲೀಟರ್ ನೀರಿಗೆ 0.3 ಮಿ.ಲೀ ನಂತೆ ಎಕರೆಗೆ 200 ರಿಂದ 300 ಲೀಟರ್ ಸಿಂಪರಣಾ ದ್ರಾವಣವನ್ನು ಬಳಸಿ ಸಿಂಪಡಿಸುವ ಮೂಲಕ ಈ ಕೀಟವನ್ನು ಹತೋಟಿ ಮಾಡಬಹುದು.

ಕೀಟನಾಶಕಗಳನ್ನು ಸಿಂಪರಣೆ ಮಾಡುವಾಗ ಅಗತ್ಯ ಮುನ್ನೇಚ್ಚಾರಿಕೆ ವಹಿಸಬೇಕು ಎಂದು ರಾಯಚೂರು ಕೃಷಿ ವಿಜ್ಞಾನಗಳ ವಿಜ್ಞಾನ ಕೇಂದ್ರದ ಬೇಸಾಯ ತಜ್ಞರಾದ ಡಾ. ಮಲ್ಲರೆಡ್ಡಿ ತಿಳಿಸಿದರು. ಈ ಬಾರಿ ಮುಂಗಾರು ಉತ್ತಮವಾಗಿ ಪ್ರಾರಂಭವಾಗಿರುವುದರಿಂದ ಉತ್ತಮ ಮಳೆಯಾಗಿದ್ದು ಹತ್ತಿ ಮತ್ತು ಜೋಳಕ್ಕೆ ಪರ್ಯಾಯವಾಗಿ ಈ ಬಾರಿ ಹೆಚ್ಚಿನ ವಿಸ್ತೀರ್ಣದಲ್ಲಿ ರೈತರು ಸೂರ್ಯಪಾನ ಬೆಳೆಯನ್ನು ಬೆಳೆದಿದ್ದು ಕಾಳು ಕಟ್ಟುವ ಹಂತದಲ್ಲಿ ಬೆಳೆಗೆ ತೆನೆ ತಿನ್ನುವ ಕೀಟದ ಹಾವಳಿ ಹೆಚ್ಚಾಗಿರುವುದರಿಂದ ರೈತರು



ಸಂಕಷ್ಟದಲ್ಲಿದ್ದು ಕೃಷಿ ಇಲಾಖೆಯ ಅಧಿಕಾರಿಗಳು ರೈತರ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲಿಸಿ ಸೂಕ್ತವಾದ ಕೀಟನಾಶಕಗಳನ್ನು ರೈತ ಸಂಪರ್ಕ ಕೇಂದ್ರಗಳ ಮೂಲಕ ರೈತರಿಗೆ ವಿತರಿಸಿದಲ್ಲಿ ಅನುಕೂಲವಾಗಲಿದೆ ಎನ್ನುತ್ತಾರೆ ರೈತ ದೇವರಾಜ ದೇವಿಪುರ.

# ಸಾರಿಗೆ ನೌಕರರಿಗೆ ಸಿಎಂ ಪರಿಹಾರ ನೀಡಲಿ



**ಬೆಂಗಳೂರು,ಆ.05**–ಸರಕಾರಿ ಸಾರಿಗೆ ನೌಕರರ ಮುಷ್ಕರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕೂಡಲೇ ಪರಿಹಾರ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಆಗ್ರಹಿಸಿದ್ದಾರೆ.

ನಗರದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಮುಷ್ಕರದಿಂದ ಬಸ್ ಸಿಗದೇ ಗ್ರಾಮೀಣ ಭಾಗದಲ್ಲಿ ಶಾಲಾ ಮಕ್ಕಳಿಗೆ ತೀವ್ರ ಸಮಸ್ಯೆ ಆಗಿದೆ. ಸರಕಾರಿ ಬಸ್ಸಿಲ್ಲದೆ ಕಾಲೇಜು, ಶಾಲಾ ವಿದ್ಯಾರ್ಥಿಗಳು ಪರದಾಡುತ್ತಿದ್ದಾರೆ ಎಂದು ಗಮನ ಸೆಳೆದರು. ಗ್ಯಾರಂಟಿ ಕಾರಣಕ್ಕಾಗಿ ಗ್ರಾಮೀಣ ಭಾಗದ ಬಸ್ ಓಡಾಟವನ್ನು ಕಡಿತಗೊಳಿಸಿದ್ದಾರೆ ಎಂದು ಅವರು ಆಕ್ಷೇಪಿಸಿದರು.

ಕೆಎಸ್‌ಆರ್‌ಟಿಸಿ ಮತ್ತಿತರ ಸಾರಿಗೆ ಸಂಸ್ಥೆಗಳ ನೌಕರರಿಗೆ ವೇತನ ಕೊಡಲಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಬಹಳ ತಿಂಗಳುಗಳಿಂದ ಆರ್ಥಿಕ ಮುಗ್ಗಟ್ಟು ಇದ್ದು, ಸಮಸ್ಯೆ ಉಲ್ಬಣವಾಗಿದೆ. ಹಾಗಾಗಿ ಅವರ ಬೇಡಿಕೆ ಈಡೇರಿಸಲು ಮುಖ್ಯಮಂತ್ರಿಗಳಿಗೆ ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದರು.

ಮುಖ್ಯಮಂತ್ರಿಗಳು ತಡ ಮಾಡದೇ, ತಕ್ಷಣವೇ ಕಾರ್ಮಿಕರ ಮತ್ತು ಅಧಿಕಾರಿಗಳ ಸಭೆ ಕರೆಯಬೇಕು. ಅವರ ಸಮಸ್ಯೆಗೆ ಪರಿಹಾರ ನೀಡಬೇಕು. ಜನಸಾಮಾನ್ಯರಿಗೆ ತೊಂದರೆ ಆಗುವುದನ್ನು ತಪ್ಪಿಸಬೇಕು ಎಂದು ಒತ್ತಾಯಿಸಿದರು. ಇದು ಮುಖ್ಯಮಂತ್ರಿಗಳ ಕರ್ತವ್ಯ. ಸಾರಿಗೆ ಸಚಿವರೂ ಕುಳಿತು ಸಮಸ್ಯೆಗೆ ಪರಿಹಾರ ನೀಡಬೇಕೆಂದು ಆಗ್ರಹವನ್ನು ಮುಂದಿಟ್ಟರು. ರಾಹುಲ್ ಗಾಂಧಿಯವರ ಬೆಂಗಳೂರು ಭೇಟಿ ಕಾರಣಕ್ಕಾಗಿ ಮುಖ್ಯಮಂತ್ರಿಗಳು ನಿನ್ನೆ ಸಾರಿಗೆ ನೌಕರರ ಸಭೆ ಕರೆದಿದ್ದರು ಎಂದೂ ಅವರು ಆರೋಪಿಸಿದರು.

ಏನು ಪರ್ಯಾಯ ವ್ಯವಸ್ಥೆ ಮಾಡಿದ್ದಾರೆ? ನಿನ್ನೆ ಸುತ್ತೋಲೆಯನ್ನೂ ಹೊರಡಿಸಿದ್ದಾರೆ. ಖಾಸಗಿ ಶಿಕ್ಷಣ ಸಂಸ್ಥೆಗಳ ಬಸ್‌ಗಳೂ ಬೇಕೆಂದು ನಿನ್ನೆ ಪತ್ರ ಬರೆದಿದ್ದಾರೆ. ಮೊದಲೇ ವ್ಯವಸ್ಥೆ ಹಾಳು ಮಾಡಲು ಹೊರಟಿದ್ದಾರೆ. ಈಗ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲೂ ಸಮಸ್ಯೆ ಹುಟ್ಟಿಸಲು ಹೊರಟಿದ್ದೀರಿ ಎಂದು ಅವರು ಈ ಕುರಿತ ಪ್ರಶ್ನೆಗೆ ಉತ್ತರ ನೀಡಿದರು.

ಗಡ್ಡಕ್ಕೆ ಬೆಂಕಿ ಹತ್ತಿಕೊಂಡಾಗ ಸಮಸ್ಯೆ ಪರಿಹರಿಸಲು ಹೊರಟಿದ್ದಾರೆ. ಈಗಲೂ ಕಾಲ ಮಿಂಚಿಲ್ಲ; ಮುಷ್ಕರ ಈಗಾಗಲೇ ಪ್ರಾರಂಭವಾಗಿದೆ. ಸಂಬಂಧಿತರನ್ನು ಕರೆದು ಸಮಸ್ಯೆ ಪರಿಹರಿಸಬೇಕು ಎಂದು ಅವರು ತಿಳಿಸಿದರು. ವಿಪಕ್ಷ ನಾಯಕ ಆರ್.ಅಶೋಕ್, ಮಾಜಿ ಉಪ ಮುಖ್ಯಮಂತ್ರಿ ಮತ್ತು ಶಾಸಕ ಡಾ.ಸಿ.ಎನ್. ಅಶ್ವತ್ಥನಾರಾಯಣ್ ಅವರು ಉಪಸ್ಥಿತರಿದ್ದರು.

# ಸಾರಿಗೆ ನೌಕರರ ಅನಿರ್ದಿಷ್ಟ ಮುಷ್ಕರ: ಪ್ರಯಾಣಿಕರ ಪರದಾಟ



**ಕಲಬುರಗಿ ಆ. 05**–ವಿವಿಧ ಬೇಡಿಕೆಗಳಿಗೆ ಪಟ್ಟು ಹಿಡಿದ ಸಾರಿಗೆ ನೌಕರರು ಸರಕಾರದ ಸಂಧಾನಕ್ಕೂ ಬಗ್ಗದೇ, ಒಂದು ದಿನ ಮುಷ್ಕರ ಮುಂದೂಡಬೇಕೆಂಬ ಹೈಕೋರ್ಟ ಆದೇಶ ಲಕ್ಷಿಸದೇ ಇಂದು ಅನಿರ್ಧಿಷ್ಟಾವಧಿ ಮುಷ್ಕರ ಆರಂಭಿಸಿದ್ದಾರೆ.

4 ಸಾರಿಗೆ ನಿಗಮಗಳ ಸುಮಾರು 1.20 ಲಕ್ಷನೌಕರರು ಮುಷ್ಕರದಲ್ಲಿ ಭಾಗವಹಿಸುತ್ತಿದ್ದು,ಸುಮಾರು 23 ಸಾವಿರ ಬಸ್‌ಗಳು ಮಂಗಳವಾರ ಬಂದ್ ಆಗಲಿವೆ.

ವೇತನ ಪರಿಷ್ಕರಣೆ,ಹೆಚ್ಚುವರಿ ವೇತನ ಬಾಕಿ ಬಿಡುಗಡೆ ಸೇರಿ ವಿವಿಧ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಸಾರಿಗೆ ನೌಕರರು ಇಂದಿನಿಂದ ಅನಿರ್ದಿಷ್ಟ ಮುಷ್ಕರ ಆರಂಭಿಸಿದ್ದರಿಂದ ರಾಜ್ಯದ ಎಲ್ಲೆಡೆಯಂತೆ ಕಲಬುರಗಿ,ಬೀದರ, ವಿಜಯಪುರ ಯಾದಗಿರಿ ಜಿಲ್ಲೆಯಲ್ಲಿ ಬಸ್‌ಸಂಚಾರ ಸಂಪೂರ್ಣವಾಗಿ ಸ್ಥಗಿತಗೊಂಡಿದ್ದು ಪ್ರಯಾಣಿಕರು ಪರದಾಡುವಂತಾಗಿದೆ.

ನಿನ್ನೆಯಷ್ಟೇ ಸಾರಿಗೆ ನೌಕರರ ಮುಖಂಡರ ಜೊತೆಗೆ ಮುಖ್ಯಮಂತ್ರಿಗಳು ಬೆಂಗಳೂರಿನಲ್ಲಿ ಸಭೆ ನಡೆಸಿದ್ದರು. ಈ ಸಭೆಯಲ್ಲಿ ಮಾತುಕತೆಗಳು ವಿಫಲವಾಗಿದ್ದರಿಂದ ಸಾರಿಗೆ ಮುಷ್ಕರ ಇಂದಿನಿಂದ ಆರಂಭಗೊಂಡಿದೆ.

ಬೆಳಿಗ್ಗೆ 6 ಗಂಟೆಯಿಂದಲೇ ಸಾರಿಗೆ ಮುಷ್ಕರ ಆರಂಭವಾಗಿದ್ದರಿಂದ ಕಲಬುರಗಿ ಜಿಲ್ಲೆಯ ಯಾವುದೇ ಬಸ್ ನಿಲ್ದಾಣದಲ್ಲಿ ಬಸ್ ಓಡಾಟ ಕಂಡು ಬರಲಿಲ್ಲ. ನಗರದ ಬಸ್ ಡಿಪೊಗಳಿಂದ ಬಸ್‌ಗಳು ಸಂಚಾರಕ್ಕೆ ಇಳಿಯಲಿಲ್ಲ. ಬಸ್‌ಚಾಲಕರು ಹಾಗೂ ನಿರ್ವಾಹಕರು ಮುಷ್ಕರದಲ್ಲಿ ಪಾಲ್ಗೊಂಡಿದ್ದರಿಂದ ಕೇಂದ್ರ ಬಸ್ ನಿಲ್ದಾಣ ಸೇರಿದಂತೆ ಜಿಲ್ಲೆಯ ಎಲ್ಲ ಬಸ್ ನಿಲ್ದಾಣಗಳಲ್ಲಿ ಬಸ್ ಓಡಾಟ ಇಲ್ಲದೆ ಬಸ್ ನಿಲ್ದಾಣಗಳು ಬಿಕೋ ಎನ್ನುತ್ತಿರುವುದು ಕಂಡು ಬಂದಿತು.

ಮುಷ್ಕರದ ವಿಷಯ ತಿಳಿಯದೆ ಬಸ್ ನಿಲ್ದಾಣಕ್ಕೆ ಆಗಮಿಸಿದ್ದ ಪ್ರಯಾಣಿಕರು ಬಸ್ ಇಲ್ಲದೆ ಪರದಾಡಿದರು. ಅನಿವಾರ್ಯ ಕೆಲಸಗಳಿಗೆ ಆಗಮಿಸಿದ್ದ ಪ್ರಯಾಣಿಕರು ವಿಧಿ ಇಲ್ಲದೆ ಖಾಸಗಿ ಬಸ್ಸುಗಳ ಮೊರೆ ಹೋಗಬೇಕಾಯಿತು. ದಿನಂಪ್ರತಿ ಖಾಲಿ ಖಾಲಿಯಾಗಿ ನಿಲ್ಲುತ್ತಿದ್ದ ಟೆಂಪೊ ಟ್ಯಾಕ್ಸ್, ಮ್ಯಾಕ್ಸ್ ಕ್ಯಾಬ್, ಆಟೋಗಳಿಗೆ ಪ್ರಯಾಣಿಕರು ಮುಗಿಬಿದ್ದರು.

ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ,ಅಶೋಕ ನಗರ ಪಿಐ ಅರುಣಕುಮಾರ ಮತ್ತು ಹಿರಿಯ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ನಗರದ ಕೇಂದ್ರ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಪರಿಸ್ಥಿತಿಯ ಪರಿಶೀಲನೆ ನಡೆಸಿದರು.ಯಾವುದೇ ಅಹಿತಕರ ಘಟನೆ ನಡೆಯದಂತೆ ವ್ಯಾಪಕ ಬಂದೋಬಸ್ತ್ ಮಾಡಲಾಗಿದೆ.

ಆಟೋ ,ಜೀಪ್ ಮತ್ತು ಖಾಸಗಿ ಬಸ್‌ಗಳು ಕೇಂದ್ರ ಬಸ್ ನಿಲ್ದಾಣದ ಆವರಣದಲ್ಲಿ ಬಂದು ನಿಂತಿದ್ದು, ಪ್ರಯಾಣಿಕರು ಸಮೀಪದ ಊರುಗಳಿಗೆ ತೆರಳಲು ಪರದಾಡುತ್ತಿದ್ದಾರೆ.

# ಅಗಸಿ ಮೇಲಿನ ಗಡಿಯಾರ ಅಳವಡಿಸಲು ಆಗ್ರಹ

**ಚಿಟಗುಪ್ಪ,ಅ.05**–ಪಟ್ಟಣಕ್ಕೆ ಹೆಸರುವಾಸಿಯಾಗಿರುವ ಆಗಸಿ( ಬೇಸ್ ) ಮೇಲಿರುವ ಗಡಿಯಾರವನ್ನು ಪುನಃ ಅಳವಡಿಸಬೇಕೆಂದು ಕನ್ನಡ ಸೇನೆ ಕರ್ನಾಟಕದ ವತಿಯಿಂದ ಪುರಸಭೆ ಮುಖ್ಯಾಧಿಕಾರಿ ಗಳಿಗೆ ಮನವಿ ಕೊಡಲಾಯಿತು. ಇದು ಒಂದು ಕಾಲದಲ್ಲಿ ಪಟ್ಟಣದ ಮುಖ್ಯದ್ವಾರವಾಗಿತ್ತು.

ಅಲ್ಲಿ ಕುಳಿತಿರುವ ಜನರಿಗೆ ಸಮಯ ನೋಡಲು ದ್ವಾರದ ಮೇಲೆ ಅಳವಡಿಸಿರುವ ಗಡಿಯಾರದಲ್ಲಿ ಸಮಯವನ್ನು ನೋಡಲು ಅನುಕೂಲ ಆಗುತ್ತಿತ್ತು. ಆದರೆ ಸುಮಾರು ವರ್ಷಗಳಿಂದ ಕೆಟ್ಟು ಹೋಗಿರುವ ಗಡಿಯಾರವನ್ನು ಸರಿಪಡಿಸಬೇಕು ಎಂದು ಕನ್ನಡ ಸೇನೆ ಕರ್ನಾಟಕ ಪದಾಧಿಕಾರಿಗಳು ಪುರಸಭೆ ಅಧಿಕಾರಿಗಳಿಗೆ ಹಾಗೂ ಪುರಸಭೆ ಸದಸ್ಯರಲ್ಲಿ ಗಡಿಯಾರವನ್ನು ಪುನಃ ಅಳವಡಿಸಬೇಕಾಗಿ ಕನ್ನಡ ಸೇನೆ ಕರ್ನಾಟಕ ತಮ್ಮಲ್ಲಿ ಮನವಿ ಮಾಡಿಕೊಳ್ಳುತ್ತೇವೆ. ಅದೇರೀತಿ ಆಗಸ್ಟ್ 15 ರ ಒಳಗಾಗಿ ಈ ಕಾರ್ಯ ಕೈಗೊಳ್ಳಬೇಕು, ವಿನಾಕಾರಣ ವಿಳಂಬವಾದಲ್ಲಿ ಆಗಸ್ಟ್ 16 ರಂದು ಪುರಸಭೆ ಮುತ್ತಿಗೆ ಹಾಕಲಾಗುವುದು. ಈ ಸಂದರ್ಭದಲ್ಲಿ ಕನ್ನಡ ಸೇನೆ , ಚಿಟ ಗುಪ್ಪ ತಾಲೂಕ ಅಧ್ಯಕ್ಷರಾದ ಪವನ್ ಪೂಜಾರಿ, ಉಪಾಧ್ಯಕ್ಷರಾದ ಸತೀಶ್ ಗಂಜಿ,ಉಪಾಧ್ಯಕ್ಷರು ನಾಗರಾಜ್ ಹುಡುಗಿ.

ನಗರ ಅಧ್ಯಕ್ಷ ಕಾಶೀನಾಥ್ ರೆಕುಲಗಿ. ಮೊಷಿನ್ ಜಮಾದಾರ್. ಯುನೋಸ್ ಖಾದ್ರಿ. ಖಧೀರ್ ಖಾನ್. ತಿಪ್ಪಣ್ಣ ಇಟಗ. ಹುಸೇನಪ್ಪ. ವಿದ್ಯಾರ್ಥಿ ಒಕಟದ ತಲೂಕು ಉಪಾಧ್ಯಕ್ಷರಾದ ಸಿದ್ದು ಸೋನಾರ್. ವೇಣು ಕೊಂಡ . ಅಭಿ ಆರ್ಯ. ಲಕ್ಷ್ಮಣ್. ರಾಜು ರವಿ ಕೃಷ್ಣ. ಗಣೇಶ್ ಬಾಬು. ಮಕ್ದುಮ್ 96 ಲಾಖ್ . ಶಿವರಾಜ್ ಸ್ವಾಮಿ ಹಾಗೂ ಅನೇಕ ಕನ್ನಡ ಸೇನೆ ಕಾರ್ಯಕರ್ತರು ಉಪಸ್ಥಿತರಿದ್ದರುಎಂಡಿ ಯೂನಸ್ ಹಾಗೂ ಅನೇಕ ಪದಾಧಿಕಾರಿಗಳು ಹಾಜರಿದ್ದರು

# ವಿದ್ಯಾರ್ಥಿನಿಯ ಸಾವಿನ ತನಿಖೆಗೆ ಸಂಪೂರ್ಣ ಸಹಕಾರ

CENTRAL UNIVERSITY OF KARNATAKA

**ಕಲಬುರಗಿ,ಆ.05**–ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಭೂಗರ್ಭಶಾಸ್ತ್ರ ವಿಭಾಗದಲ್ಲಿ ಬಿಎಸ್ಸಿ 5ನೇ ತರಗತಿ ಓದುತ್ತಿದ್ದ ಕುಮಾರಿ ಜಯಶ್ರೀ ನಾಯಕ ಅವರು ವಿಶ್ವವಿದ್ಯಾಲಯದ ಯಮುನಾ ವಸತಿನಿಲಯದ ತಮ್ಮ ಕೋಣೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವುದಕ್ಕೆ ವಿಶ್ವವಿದ್ಯಾಲಯದ ಕುಲಸಚಿವರು ವಿಷಾದ ವ್ಯಕ್ತಪಡಿಸಿದ್ದಾರೆ.

ಯಾವ ಕಾರಣಕ್ಕೆ ಕುಮಾರಿ ಜಯಶ್ರೀ ನಾಯಕ ಅವರು ಆತ್ಮ ಹತ್ಯೆ ಮಾಡಿಕೊಂಡರು ಎಂಬುದು ಪೋಲಿಸ ತನಿಖೆಯಿಂದ ಹೊರಬರಬೇಕಿದೆ. ಪೋಲಿಸರು ಈಗಾಗಲೇ ವಿದ್ಯಾರ್ಥಿನೀಯ ಮೊಬೈಲ್ ಹಾಗು ಅವಳಿಗೆ ಸಂಬಂಧಿಸಿದ ಕೆಲವಸ್ತುಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಇದಲ್ಲದೆ ವಿದ್ಯಾರ್ಥಿನೀಯ ಮೊಬೈಲನ ಒಳ ಮತ್ತು ಹೊರಹೊದ ಕರೆಗಳ ವಿವರವನ್ನುಕೂಡ ಪಡೆದಿದ್ದಾರೆ. ಪೊರೆನಸಿಕ್ ವಿಭಾಗದ ಅಧಿಕಾರಿಗಳು ಸಹ ಸ್ಥಳಕ್ಕೆ ಧಾವಿಸಿ ಮಾಹಿತಿ ಪಡೆದಿದ್ದಾರೆ. ಇದರೊಂದಿಗೆ ಪೋಲಿಸ ಅಧಿಕಾರಿಗಳು ವಿದ್ಯಾರ್ಥಿ ಕಲ್ಯಾಣಾಧಿಕಾರಿಗಳ ಕಛೇರಿ, ವಿದ್ಯಾರ್ಥಿಯ ವಸತಿನಿಲಯದ ಹಾಗು ಊಟಮಾಡುವ ವಸತಿನಿಲಯದ ಸಿ ಸಿ ಟಿವಿ ಪೂಟೆಜಗಳನ್ನು ಕೂಡ ವಶಕ್ಕೆ ಪಡೆದುಕೊಂಡಿದ್ದಾರೆ. ವಿದ್ಯಾರ್ಥಿನೀಯ ಸಾವಿನ ತನಿಕೆ ಪ್ರಗತಿಯಲ್ಲಿದೆ. ಇದಕ್ಕೆ ಕಾರಣವೇನೆಂಬುದು ತನಿಖೆಯ ನಂತರಗೊತ್ತಾಗಲಿದೆ. ಈ ಘಟನೆಯ ಮುಂಚೆ ವಿದ್ಯಾರ್ಥಿನಿ ವಿದ್ಯಾರ್ಥಿ ಕಲ್ಯಾಣಾ ಧಿಕಾರಿಗಳನ್ನು ಭೇಟಿಯಾಗಿಲ್ಲ ಹಾಗು ಇನ್ನಾವುದೆ ರೀತಿಯಲ್ಲಿ ಅವರನ್ನು ಸಂಪರ್ಕಿಸಿಲ್ಲ ಹಾಗೂ ಯಾವುದೇ ಮಾಹಿತಿ ನೀಡಿಲ್ಲ. ಕೆಲ ಮಾಧ್ಯಮಗಳಲ್ಲಿ ಈ ಕುರಿತು ತಪ್ಪು ಮಾಹಿತಿ ಪ್ರಸಾರವಾಗಿದೆ. ಯಾರಿಗಾದರೂ ಲೈಂಗಿಕ ಹಿಂಸೆ ಅಥವಾ ಕಿರುಕುಳವಾದರೆ ದೂರು ಸಲ್ಲಿಸಲು ಹಾಗು ಅದರ ಕುರಿತು ವಿಚಾರಣೆ ಮಾಡಲು ಆಂತರಿಕ ದೂರು ಸಮಿತಿ (ಐಸಿಸಿ) ಇದೆ. ವಿದ್ಯಾರ್ಥಿ ಕಲ್ಯಾಣಾಧಿಕಾರಿಗಳಿಗೆ ಈ ಕುರಿತು ಯಾವುದೇ ಅಧಿಕಾರ ಇರುವುದಿಲ್ಲ. ವಿದ್ಯಾರ್ಥಿನಿ ಜೀವಂತವಿದ್ದರೇ ಅವಳನ್ನು ರಕ್ಷಿಸಬೇಕೆಂಬ ಸದುದ್ದೇಶದಿಂದ ಭದ್ರತಾ ಅಧಿಕಾರಿ ವಿದ್ಯಾರ್ಥಿನೀಯಕೋಣೆಯ ಬಾಗಿಲನ್ನು ಮುರಿದು ತೆಗೆದಿರುತ್ತಾರೆ. ಆ ಸಂದರ್ಭದಲ್ಲಿ ವಿದ್ಯಾರ್ಥಿ ಕಲ್ಯಾಣಾಧಿಕಾರಿ ಅಲ್ಲಿ ಉಪಸ್ಥಿತರಿರಲಿಲ್ಲ. ವಸತಿ ನಿಲಯದ ಮೇಲ್ವಿಚಾರಕರು ಮತ್ತು ಆ ಕೋಣೆಯಲ್ಲಿ ವಾಸಿಸುತ್ತಿದ್ದ ವಿದ್ಯಾರ್ಥಿನೀಯರ ಸಮ್ಮುಖದಲ್ಲಿ ಕೋಣೆಯ ಬಾಗಿಲನ್ನು ಮುರಿಯಲಾಗಿದೆ. ತಕ್ಷಣ ವೈದ್ಯಾಧಿಕಾರಿಗಳು ಆಗಮಿಸಿ ಜೀವ ಹೋಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದಾಗಿ ತೀಳಿಸಿರುತ್ತಾರೆ. ತಕ್ಷಣ ಮಾಹಿತಿಯನ್ನು ಪೋಲಿಸರಿಗೆ ಮತ್ತು ವಿದ್ಯಾರ್ಥಿ ನೀಯ ಪಾಲಕರಿಗೆ ತಿಳಿಸಲಾಗಿದೆ. ಸಾವಿನ ತನಿಕೆ ಪ್ರಗತಿಯಲ್ಲಿರುವಾಗ ಕೆಲ ವ್ಯಕ್ತಿಗಳು ಊಹಾ–ಪೊ?ಹಕ ಮಾಹಿತಿಗಳನ್ನು ಹಾಗೂ ತನಿಕೆಯನ್ನು ದಿಕ್ಕು ತಪ್ಪಿಸುವಂತಹ ಮಾಹಿತಿಗಳನ್ನು ವಿವಿಧ ಮಾಧ್ಯಮಗಳ ಮೂಲಕ ಹರಡುವ ಪ್ರಯತ್ನ ಮಾಡುತ್ತಿದ್ದಾರೆ. ವಿಶ್ವ ವಿದ್ಯಾಲಯದ ಘನತೆಗೆ ದಕ್ಕೆತರುವ ಂತಹ ಈ ಕೃತ್ಯವನ್ನು ವಿಶ್ವ ವಿದ್ಯಾಲಯವುಖಂಡಿಸುತ್ತದೆ ಹಾಗೂ ಪೋಲಿಸರು ಸಂಬಂಧಪಟ್ಟವರ ಮೇಲೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

ವಿಶ್ವ ವಿದ್ಯಾಲಯ ಸಾವಿನ ತನಿಕೆಗೆ ಸಂಪೂರ್ಣ ಸಹಕಾರನಿಡುತ್ತಿದೆ ಹಾಗೂ ಇನ್ನು ಮುಂದೆಯು ಸಂಪೂರ್ಣ ಸಹಕಾರ ನೀಡಲಿದೆ ಎಂದು ತಿಳಿಸಿದ್ದಾರೆ.

# 11ನೇ ಜಿಲ್ಲಾ ಸಮ್ಮೇಳನ ಯಶಸ್ವಿ



**ಕಲಬುರಗಿ:ಅ.05**– ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆಯ 11ನೇ ಜಿಲ್ಲಾ ಸಮ್ಮೇಳನವು ನಗರದ ಕನ್ನಡ ಭವನದಲ್ಲಿ ಜರುಗಿತ್ತು. ನಗರದ ಸಿದ್ದಿ ಭಾಷಾ ದರ್ಗಾ ದಿಂದ ಮೆರವಣಿಗೆ ಮುಖಾಂತರ ಕನ್ನಡ ಭವನಕ್ಕೆ ಬಂದು ಜನವಾದಿಯ ಜಿಲ್ಲಾಧ್ಯಕ್ಷರಾದ ಚಂದಮ್ಮಗೋಳಾ ಅವರಿಂದ ಧ್ವಜಾರೋಹಣ ಮಾಡಿ, ಹುತಾತ್ಮರಿಗೆ ಗೌರವ ನಮನ ಸಲ್ಲಿಸಿ ಕಾರ್ಯಕ್ರಮ ಪ್ರಾರಂಭಿಸಲಾಯಿತು. ಕಾರ್ಯಕ್ರಮದ ನಿರೂಪಣೆ ಮತ್ತು ಸ್ವಾಗತವನ್ನು ಶಾಂತಾ ಸರಡಗಿ ಅವರು ನಡೆಸಿಕೊಟ್ಟರು.

ಜಿಲ್ಲಾ ಕಾರ್ಯದರ್ಶಿಗಳಾದ ಪದ್ಮಿನಿ ಕಿರಣಗಿ ಅವರು ಪ್ರಾಸ್ತಾವಿಕ ಮಾತನಾಡುತ್ತಾ, ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆಯು 1981 ರಲ್ಲಿ ಪ್ರಾರಂಭವಾಗಿ ಈಗ 44ರ ಸಂಭ್ರಮದಲ್ಲಿದೆ. ರಾಷ್ಟ್ರಮಟ್ಟದ ಸಂಘಟನೆಯಾಗಿದ್ದು ಮಹಿಳೆಯರ ಪರವಾಗಿ ಹೋರಾಡುತ್ತಿದೆ. ದೇಶದಲ್ಲಿ ಇದು ಒಂದು ಕೋಟಿ 20 ಲಕ್ಷ ಸದಸ್ಯತ್ವ ಹೊಂದಿದೆ. ಕಲ್ಬುರ್ಗಿಯಲ್ಲಿಯೂ ಸಹ ಹಳ್ಳಿಗಳಲ್ಲಿ ಸಂಘಟನೆಯ ಸದಸ್ಯತ್ವ ಮಾಡಿ ಘಟಕಗಳು ಸ್ಥಾಪನೆಗೊಂಡು ಮಹಿಳೆಯರ ಮೇಲಿನ ಅತ್ಯಾಚಾರ ,ದೌರ್ಜನ್ಯ ,ಕೊಲೆ, ಹೆಣ್ಣು ಶಿಶು ಭ್ರೂಣ ಹತ್ಯೆ ಬಾಲ್ಯ ವಿವಾಹ, ವರದಕ್ಷಣೆ ಇವುಗಳನ್ನು ತಡೆಗಟ್ಟುವಲ್ಲಿ ನಿರಂತರವಾಗಿ ಹೋರಾಟ ಮಾಡುತ್ತಾ ಬಂದಿದೆ. ಸ್ಥಳೀಯ ಸಮಸ್ಯೆಗಳನ್ನು ಎತ್ತಿಕೊಂಡು ಹೋರಾಡಿ ಯಶಸ್ವಿಯನ್ನು ಕಂಡುಕೊಂಡಿದೆ. ಮತ್ತು ಮುಂದಿನ ದಿನಗಳಲ್ಲಿ ಮಹಿಳೆಯರ ಮೇಲಿನ ಅತ್ಯಾಚಾರ ಕೊಲೆ, ಬಾಲ್ಯ ವಿವಾಹ, ಹೆಣ್ಣು ಶಿಶು ಬ್ರೂಣ ಹತ್ಯೆ ತಡೆಗಟ್ಟಲು ಪಿ.ಸಿ ಪಿ ಅಂಡ್ ಡಿಟಿ ಸಮರ್ಪಕವಾಗಿ ಕೆಲಸ ನಿರ್ವಹಿಸುವಂತೆ ಯೋಜನೆ ಹಾಕಿಕೊಂಡಿದೆ. ಹೆಣ್ಣು ಶಿಶು ಬ್ರೋಣಹತ್ತೆ ಹೆಚ್ಚಾಗುತ್ತಿರುವ ಪರಿಣಾಮವಾಗಿ ಹೆಣ್ಣು ಮಕ್ಕಳ ಸಂಖ್ಯೆ ಕುಸಿತ ವಾಗುತ್ತಿದೆ. ಉದ್ಯೋಗ ಖಾತ್ರಿ ಯೋಜನೆ ನಗರಕ್ಕೂ ವಿಸ್ತರಿಸುವಂತೆ, ಒಂಟಿ ಮಹಿಳೆಯರಿಗೆ ಸರ್ಕಾರದ ಸೌಲಭ್ಯಗಳು ಸಿಗಲು ಯೋಜನೆಗಳನ್ನು ಹಾಕಿಕೊಂಡು ಮುಂದುವರೆಯಲಾಗುತ್ತದೆ.

ಬಾಲ್ಯ ವಿವಾಹಗಳು ಹೆಚ್ಚಾಗುತ್ತಿರುವದರಿಂದ ಬಾಲ ಗರ್ಭಿಣಿಯರ ಸಂಖ್ಯೆಯು ಸಹ ಹೆಚ್ಚಾಗುತ್ತಿದೆ. ಆರೋಗ್ಯ ಇಲಾಖೆಯ ಸರ್ವೆ ಪ್ರಕಾರ ಏಪ್ರಿಲ್ 2024 ರಿಂದ ಫೆಬ್ರುವರಿ 2025 ರವರೆಗೆ ಕಲಬುರ್ಗಿ ಜಿಲ್ಲೆಯಲ್ಲಿ 822 ಬಾಲ ಗರ್ಭಿಣಿಯರು ಪತ್ತೆಯಾಗಿರುವರು. ಹಾಗಾಗಿ ಬಾಲ್ಯ ವಿವಾಹಗಳನ್ನು ತಡೆಗಟ್ಟುವಲ್ಲಿ ಸರಕಾರ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ. ಎಂದು ನುಡಿದರು. ನಂತರ ಅಗಲಿದ ಹುತಾತ್ಮರಿಗೆ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಡಾಕ್ಟರ್ ಮೀನಾಕ್ಷಿ ಬಾಳಿ ರಾಜ್ಯಾಧ್ಯಕ್ಷರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಮಹಿಳೆಯರು ಮುಂದಾಗದಿದ್ದರೆ ಮುಂದಿನ ದಿನಗಳಲ್ಲಿ ಆಪತ್ತು ತಪ್ಪಿದ್ದಲ್ಲ . ನೀವೆಲ್ಲರೂ ಒಗ್ಗಟ್ಟಿನಿಂದ ನಿಮ್ಮ ಸಮಸ್ಯೆಗಳನ್ನು ಎತ್ತಿಕೊಂಡು ಹೋರಾಡದಿದ್ದರೆ ಮುಂದಿನ ದಿನಗಳು ಕಷ್ಟ ಕಷ್ಟದಾಯಕವಾಗಿರುತ್ತದೆ ಎಂದರು. ಮುಖ್ಯ ಅತಿಥಿಗಳಾಗಿ ಮಾತನಾಡಿದ ಕೆ. ನೀಲಾ ರವರು

ಇತ್ತೀಚಿಗೆ ಮಹಿಳೆಯರ ಮೇಲೆ ಅತ್ಯಾಚಾರ ಕೊಲೆಗಳು ದಿನೇ ದಿನೇ ಯಾವುದೇ ಕಾನೂನಿನ ಭಯವಿಲ್ಲದೆ ನಡೆಯುತ್ತಲೇ ಇವೆ. ಅವುಗಳ ವಿರುದ್ಧ ಬೀದಿಗೆ ಬಂದು ಹೋರಾಟ ಮಾಡದಿದ್ದರೆ ಮುಂದಿನ ನಮ್ಮ ಮಕ್ಕಳ ಭವಿಷ್ಯ ಕಷ್ಟದಾಯಕ ವಾಗಿರುತ್ತದೆ. ಹಾಗಾಗಿ ಮಹಿಳೆಯರು ಎಚ್ಚೆತ್ತುಕೊಳ್ಳಬೇಕು ಎಂದು ಕರೆ ಕೊಟ್ಟರು.

ಮುಖಂಡರುಗಳಾದ ಶಾಂತಾ ಘಂಟಿ, ಗೌರಮ್ಮ ಪಾಟೀಲ್, ಲವಿತ್ರ ವಸ್ತ್ರದ್, ಸುಜಾತಾ ಕುಸುನೂರ ಸಮ್ಮೇಳನಕ್ಕೆ ಶುಭ ಕೋರಿ ಮಾತನಾಡಿದರು.

ಜಿಲ್ಲಾ ಕಾರ್ಯದರ್ಶಿಗಳಾದ ಪದ್ಮಿನಿ ಕಿರಣಗಿ ಅವರು ಕರಡು ವರದಿಯನ್ನು ಮಂಡಿಸಿದರು. ಕೆ ನೀಲಾ ರವರು ಎರಡು ನಿರ್ಣಯಗಳನ್ನು ಪಾಸ್ ಮಾಡಿದರು. ಇಎ???ಐ ಆಸ್ಪತ್ರೆಯಲ್ಲಿ ಅತ್ಯಾಚಾರಕ್ಕೆ ಒಳಗಾದ ಬಾಲಕಿಗೆ ನ್ಯಾಯ ಸಿಗಬೇಕು, ಅಪರಾಧಿಗೆ ಕಠಿಣ ಶಿಕ್ಷೆ ಆಗಬೇಕು. ಮತ್ತು ಕಡಗಂಚಿ ವಿಶ್ವವಿದ್ಯಾಲಯದಲ್ಲಿ ಆತ್ಮಹತ್ಯೆ ಮಾಡಿಕೊಂಡ ಯುವತಿಗೆ ತನಿಖೆ ಮಾಡಿ ನ್ಯಾಯ ಸಿಗುವಂತಾಗಬೇಕು.

ನಂತರ ಸಂಘಟನೆಯ ಹೊಸ ಜಿಲ್ಲಾ ಸಮಿತಿ ರಚನೆ ಮಾಡಲಾಯಿತು. ಅಧ್ಯಕ್ಷರಾಗಿ ಪದ್ಮಿನಿ ಕಿರಣಗಿ, ಪ್ರಧಾನ ಕಾರ್ಯದರ್ಶಿಗಳಾಗಿ ಶಾಂತಾ ಸರಡಗಿ, ಸುಜಾತಾ ಕಡೆಹಳ್ಳಿ ಕೋಶಾಧ್ಯಕ್ಷರಾಗಿ ಆಯ್ಕೆ ಮಾಡಲಾಯಿತು. ಕೊನೆಯಲ್ಲಿ ಗೆಲುವು ನಮ್ಮದೇ ಎಂಬ ಕ್ರಾಂತಿ ಗೀತೆಯೊಂದಿಗೆ ಸಮ್ಮೇಳನ ಮುಕ್ತಾಯವಾಯಿತು.

ಯುವ ಮಾರ್ಗ

ಬುಧವಾರ : 06-08-2025

## ಮುಂಡರಗಿ ಶ್ರೀಶಿವರಾಯ ದೇವಸ್ಥಾನ ಶ್ರಾವಣ ಮಾಸದ ಪ್ರಯುಕ್ತ ಹೇಳಿಕೆ ಕಾರ್ಯಕ್ರಮ



ಯುವ ಮಾರ್ಗ ಸುದ್ದಿ

**ಅರಕೇರಾ,ಆ.05**–ತಾಲೂಕಿನ ಮುಂಡರಗಿ ಗ್ರಾಮದಲ್ಲಿನ ಶ್ರೀ ಶಿವರಾಮ ದೇವಸ್ಥಾನದಲ್ಲಿ ಶ್ರಾವಣ ಮಾಸದ ಪ್ರಯುಕ್ತ 4ನೇ ಮತ್ತು 5ನೇ ಸೋಮವಾರ ರಂದು ಹೇಳಿಕೆ ಕಾರ್ಯಕ್ರಮ ನಡೆಯುತ್ತಿದ್ದು. ದಿನಾಂಕ 25–8–2025ದಿನಾಂಕ 26–8–2025 ಹಾಗೂ 27–8–2025ರಂದು ನಡೆಯುವ ವಿವಿಧ ಕಾರ್ಯಕ್ರಮ ಜರುಗಲಿದೆ.ಸದರಿ ಹೇಳಿಕೆ ಕಾರ್ಯಕ್ರಮದಲ್ಲಿ ಸಗಟು.ತೆಂಗಿನಕಾಯಿ ಮಾರಾಟ ಮತ್ತು ತೆಂಗಿನಕಾಯಿ ಚೀಟಿಯ ಬಹಿರಂಗ ಹರಾಜು ಇದ್ದು ಸದರಿ ಹರಾಜಿನಲ್ಲಿ ಆಸಕ್ತಿಯುಳ್ಳವರು ಮುಂಗಡ ಮೊತ್ತ ರೂಪಾಯಿ 10 ಸಾವಿರ ಗಳೊಂದಿಗೆ ದಿನಾಂಕ 11–8–2025ರಂದು ಬೆಳಿಗ್ಗೆ 11ಗಂಟೆಗೆ ತಹಶೀಲ್ದಾರ್ ಕಾರ್ಯಾಲಯ ದೇವದುರ್ಗದಲ್ಲಿ ಹಾಜರಾಗಲು ಅಧ್ಯಕ್ಷರು ಶ್ರೀ ಶಿವರಾಯ ದೇವಸ್ಥಾನ ಮುಂಡರಗಿ ಅರಕೇರಾ ತಹಸೀಲ್ದಾರ್ ಅಮರೇಶ ಬೀರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಸರಕಾರಿ ಆದರ್ಶ ವಿದ್ಯಾಲಯ ಅರಕೇರಾ 6ನೇ ತರಗತಿಗೆ ಕೌನ್ಸೆಲಿಂಗ್



ಯುವ ಮಾರ್ಗ ಸುದ್ದಿ

**ಅರಕೇರಾ,ಆ.05**–ಅರಕೇರಾ ಪಟ್ಟಣದಲ್ಲಿ ಸರಕಾರಿ ಆದರ್ಶ ವಿದ್ಯಾಲಯದ 2025–26 ನೇ ಸಾಲಿನ 6ನೇ ತರಗತಿ ದಾಖಲಾತಿ ಕೌನ್ಸೆಲಿಂಗ್ ಪ್ರಕ್ರಿಯೆ ಆಗಸ್ಟ್ 11 ರಿಂದ 14 ರವರಗೆ ನಡೆಯಲಿದ್ದು 1 ರಿಂದ 3 ನೇ ಸುತ್ತಿನಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಅರ್ಹ ಅಭ್ಯರ್ಥಿಗಳು ಭಾಗವಹಿಸಬಹುದು . ಸಾಮಾನ್ಯ ವರ್ಗದ ದಾಖಲಾತಿ ಪ್ರಕ್ರಿಯೆ ಆಗಸ್ಟ್ 11 ಹಾಗೂ 12 ರಂದುನಡೆಯಲಿದೆ.ಮೀಸಲಾತಿ ವರ್ಗದ ದಾಖಲಾತಿ ಪ್ರಕ್ರಿಯೆ 13 ಹಾಗೂ14 ರಂದು ನಿಗದಿಪಡಿಸಲಾಗಿದೆ . ನಿಗದಿತ ದಿನಾಂಕದಂದು ಬೆಳಿಗ್ಗೆ 10 ಗಂಟೆಗೆ ಪೋಷಕರು ಅಗತ್ಯ ದಾಖಲೆಗಳನ್ನು ಕಡ್ಡಾಯವಾಗಿ ದಾಖಲಾತಿ ಸಮಯದಲ್ಲಿ ಒದಗಿಸಬೇಕು . ಸಮಯಕ್ಕೆ ಸರಿಯಾಗಿ ದಾಖಲಾತಿಗಳೊಂದಿಗೆ ಹಾಜರಾಗದಿದ್ದಲ್ಲಿ ಅಥವಾ ಗೈರು ಹಾಜರಾದಲ್ಲಿ ಮತ್ತೋಮ್ಮೆ ಅವಕಾಶ ನೀಡಲಾಗುವುದಿಲ್ಲಾ ಎಂದು ಸರಕಾರಿ ಆದರ್ಶ ವಿದ್ಯಾಲಯ ಅರಕೇರಾ ಮುಖ್ಯಗುರುಗಳಾದ ಶಿವಪುತ್ರಪ್ಪ ಇವರನ್ನು ಹೆಚ್ಚಿನ ಮಾಹಿತಿಗಾಗಿ 9902905064 ಮೊಬೈಲ್ ನಂಬರ್ ಗೆ ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಎಂಟು ತಾಸಿನಲ್ಲಿ ಒಂಬತ್ತು ಎಕರೆ ಎಡೆ ಹೊಡೆದು ಬೆರಗು ಮೂಡಿಸಿದ ರೈತ



**ಕಲಬುರಗಿ,ಆ.05**–ತಾಲ್ಲೂಕಿನ ಕಡಣಿ ಗ್ರಾಮದಲ್ಲಿ ಯುವ ರೈತನೊಬ್ಬ 8 ತಾಸಿನಲ್ಲಿ 9 ಎಕರೆ ಎಡೆ ಹೊಡೆಯುವುದರ ಮೂಲಕ ಸಾಧನೆ ಮಾಡಿದ್ದಾನೆ.

ಗ್ರಾಮದ ಮಲ್ಲು ಅಂತರಗಂಗಿ ಎಂಬ ರೈತನೇ ತನ್ನ ತೊಗರಿ ಹೊಲದಲ್ಲಿ ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಅಂದರೆ ಎಂಟು ತಾಸುಗಳ ಅವಧಿಯಲ್ಲಿ ಒಂಬತ್ತು ಎಕರೆ ಎಡೆ ಹೊಡೆಯುವುದರ ಮೂಲಕ ಬೆರಗು ಮೂಡಿಸಿದ್ದು, ಈ ಯುವ ರೈತನ ಸಾಧನೆ ಮತ್ತು ಶ್ರವಮನ್ನು ಗ್ರಾಮಸ್ಥರು ಕೊಂಡಾಂಡಿ ಗ್ರಾಮದ ಶಂಕರಲಿಂಗೇಶ್ವರ ದೇವಸ್ಥಾನ ಆವರಣದಲ್ಲಿ ಆತನಿಗೆ ಶಾಲು ಹೊದಿಸಿ ಸನ್ಮಾನಿಸಿ ಗೌರವಿಸಿದ್ದಾರೆ.

ಕೇವಲ ಎಂಟು ತಾಸುಗಳ ಅವಧಿಯಲ್ಲಿ ಒಂಬತ್ತು ಎಕರೆ ಎಡೆ ಹೊಡೆಯುವುದು ಸಾಮಾನ್ಯವಾದ ಮಾತಲ್ಲ. ಇದಕ್ಕೆ ಸಾಕಷ್ಟು ಶ್ರಮ ಮತ್ತು ಸಂಯಮ ಬೇಕಾಗುತ್ತದೆ. ಜೊತೆಗೆ ಎತ್ತುಗಳು ಸಹ ಸಾಥ್ ನೀಡಬೇಕಾಗುತ್ತದೆ. ಯುವ ರೈತ ಮಲ್ಲು ಅಂತರಗಂಗಿ ಅವರು ಎತ್ತುಗಳನ್ನು ಸಹ ತಮ್ಮ ಜೀವದಂತೆ ಅಷ್ಟೇ ಅಕ್ಕರೆಯಿಂದ ಬೆಳೆಸಿ ಅವುಗಳಿಗೆ ಯಾವುದೇ ಕೊರತೆಯಾಗದಂತೆ ನೋಡಿಕೊಂಡು ಕೃಷಿ ಮಾಡುತ್ತಿರುವುದರಿಂದಲೇ ಇಂತಹ ಸಾಧನೆ ಮಾಡಲು ಸಾಧ್ಯವಾಗಿದೆ. ಯುವ ರೈತರು ಇದೇ ರೀತಿ ಕೃಷಿಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಗ್ರಾಮದ ಗಣ್ಯರು, ಹಿರಿಯರು ಕರೆ ನೀಡಿದರು.

ಗ್ರಾಮದ ಹಿರಿಯರಾದ ಶಾಂತಮಲ್ಲಪ್ಪ ಗೊಬ್ಬೂರ, ಯಲ್ಲಾಲಿಂಗ ಪೂಜಾರಿ, ಪ್ರವೀಣ್ ನೀಲೂರ ಸೇರಿದಂತೆ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಆರೋಗ್ಯ ತಪಾಸಣೆ ಶಿಬಿರ, ವಿಶ್ವ ಸ್ತನ್ಯಪಾನ ಸಪ್ತಾಹ

ಯುವ ಮಾರ್ಗ ಸುದ್ದಿ

**ರಾಯಚೂರು,ಆ.05**–ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ತಾಲೂಕು ಆರೋಗ್ಯ ಅಧಿಕಾರಿಗಳ ಸಂಯುಕ್ತಾಶ್ರಯದಲ್ಲಿ ನಗರದ ಅಮರ ಖೇಡ್ ಆಸ್ಪತ್ರೆಯಲ್ಲಿ ಆರೋಗ್ಯ ತಪಾಸಣೆ ಶಿಬಿರ ಜೊತೆಗೆ ವಿಶ್ವ ಸ್ತನ್ಯಪಾನ ಸಪ್ತಾಹ ಆಚರಿಸಲಾಯಿತು.

ಈ ವೇಳೆ ವೈದ್ಯಾಧಿಕಾರಿ ಡಾ.ಶ್ವೇತಾಂಬರಿ ಅವರು ಮಾತನಾಡಿ, ತಾಯಿ ಎದೆಹಾಲು ಅಮೃತಕ್ಕೆ ಸಮಾನ. ಹುಟ್ಟಿದ ಅರ್ಧ ಗಂಟೆಯೊಳಗೆ ಬರುವ ಹಳದಿ ಹಾಲು ಶಿಶುವಿಗೆ ಕುಡಿಸಬೇಕು. ತಾಯಿಯ ಎದೆ ಹಾಲು ಮಗುವಿಗೆ ಮೊದಲ ಲಸಿಕೆ, ಈ ಹಳದಿ ಹಾಲು ರೋಗನಿರೋಧಕ ಶಕ್ತಿ ಹೆಚ್ಚಿಸುತ್ತದೆ. ಹುಟ್ಟಿದಾಗಿನಿಂದ ಹಿಡಿದು ಆರು ತಿಂಗಳವರೆಗೆ ಎದೆಹಾಲು ಮಾತ್ರ ಕುಡಿಸಬೇಕಂದು




ತಿಳಿಸಿದರು. ಈ ವೇಳೆ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ ಮಾತನಾಡಿ, ಈ ವರ್ಷದ ಘೋಷಣೆ ತಾಯಿ ಎದೆಹಾಲು ನೀಡುವದರಲ್ಲಿ ಹೂಡಿಕೆ ಮಾಡಿದರೆ ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಹೂಡಿಕೆ ಮಾಡಿದಂತೆ. ಸ್ತನ್ಯಪಾನ ತಾಯಿಯ ಮಮತೆಯ ಪ್ರತೀಕ. ಸ್ತನ್ಯಪಾನ ರಕ್ಷಣೆ ಎಲ್ಲರ ಪಾಲಿನ ಜವಬ್ದಾರಿ ಪ್ರತಿಯೊಬ್ಬ ತಾಯಿಯಲ್ಲಿ ತನ್ನ ಮಗುವಿಗೆ ಸಾಕಷ್ಟು ಹಾಲನ್ನು ಉತ್ಪಾದಿಸುವ ಸಾಮರ್ಥ್ಯವಿದೆ. ಎದೆಹಾಲುನ್ನುಂಡಷ್ಟು ಎದೆಹಾಲು ಉತ್ಪತ್ತಿಯಾಗುವುದು. ಮಗುವಿಗೆ ಹಾಲು ಸಾಕಾಗಲ್ಲ ಎಂಬ ಮನೋಭಾವನೆಯನ್ನು ತೊಡೆದು ಹಾಕಿ ಮಗುವಿನ ಸಮರ್ಪಕವಾದ ಪೋಷಣೆಗೆ ತಾಯಿ ತನ್ನ ಸಾಮರ್ಥ್ಯ ಅರಿತು ಎದೆಹಾಲನ್ನು ಉಣಿಸಲು ಮುಂದಾಗಬೇಕು ಎಂದರು.

ಈ ವೇಳೆ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ಅವರು ಮಾತನಾಡಿ, ಎದೆಹಾಲು ಬರುತ್ತಿಲ್ಲವೆಂದು ಬಾಟಲಿ ಹಾಲು, ಗ್ರೈಪ್ ವಾಟರ್ ಇನ್ನಿತರ ಬೇರೆ ಏನನ್ನೂ ಕುಡಿಸಬಾರದು. ಮಗುವಿಗೆ ಎದೆಹಾಲಿನ ಜೊತೆಗೆ ಲಸಿಕೆ ಹಾಕಿಸಬೇಕು ಎಂದು ತಾಯಿಂದಿರಿಗೆ ತಿಳಿಸಿದರು.

ಇದೇ ಸಂದರ್ಭದಲಿ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು ಪದ್ಮಾ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜ.ಕೆ. ಶುಶ್ರೂಷಣಾಧಿಕಾರಿ ಪುಷ್ಪಾ. ಪಿ.ಹೆಚ್.ಸಿ.ಒ ಮಹೇಶ್ವರಿ ಆಶಾ ಕಾರ್ಯಕರ್ತೆಯರಾದ ಶೋಭಾ, ಗಂಗಮ್ಮ, ನಾಗಮ್ಮ, ನಸೀಮಾ ಬಾನು, ಜಯಮ್ಮ, ಬಾನು, ಖಾಜಾ ಸೇರಿದಂತೆ ತಾಯಂದಿರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಇದ್ದರು.

# ಮಠಗಳಿಂದ ಶಾಂತಿ ಸೌಹಾರ್ದತೆ ಸಾಧ್ಯ– ಎನ್.ಎಸ್.ಬೋಸರಾಜು

ಯುವ ಮಾರ್ಗ ಸುದ್ದಿ

**ರಾಯಚೂರು,ಆ.05**–ಸಮಾಜದಲ್ಲಿ ಎಲ್ಲ ಜಾತಿ–ಧರ್ಮ ಭಾಂದವರನ್ನು ಬೇದ ಭಾವವಿಲ್ಲದೆ ಸಮಾನವಾಗಿ ಕಾಣುವ ದೇವಸ್ಥಾನ ಹಾಗೂ ಧಾರ್ಮಿಕ ಕೇಂದ್ರಗಳ ಸಂರಕ್ಷಣೆಗೆ ನಮ್ಮ ಸರ್ಕಾರ ಬದ್ದವಾಗಿದೆ. ಮಠ–ಮಾನ್ಯಗಳಿಂದ ಸಮಾಜದಲ್ಲಿ ಶಾಂತಿ, ಸೌಹಾರ್ಧತೆ ನೆಲೆಸಲಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್.ಎಸ್.ಬೋಸರಾಜು ಅವರು ತಿಳಿಸಿದರು.

ಸಿರವಾರ ತಾಲೂಕಿನ ಲಕ್ಕಂದಿನ್ನಿ ಗ್ರಾಮದಲ್ಲಿ ಕೆಕೆಆರ್ ಡಿಬಿ, ಶಾಸಕರ ಅನುದಾನದಡಿಯಲ್ಲಿ 51.20 ಲಕ್ಷ ರೂನಲ್ಲಿ ಶ್ರೀಶಿವಪ್ಪ ತಾತನವರ ಮಠದ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವ ಎನ್.ಎಸ್ ಬೋಸರಾಜು ಶಾಸಕ ಹಂಪಯ್ಯ ನಾಯಕ ಅವರು ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಲಕ್ಕಂದಿನ್ನಿ ಶ್ರೀಶಿವಪ್ಪ ತಾತನವ



ರ ದೇವಸ್ಥಾನ ಅಭಿವೃದ್ಧಿ ಕಾಮಗಾರಿಗಳನ್ನು ಗುಣ ಮಟ್ಟದೊಂದಿಗೆ ತ್ವರಿತಗತಿಯಲ್ಲಿ ಮುಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಮುಂಬರುವ ದಿನಗಳಲ್ಲಿ ಇನ್ನು ಹೆಚ್ಚಿನ ಮಠದ ಅಭಿವೃದ್ಧಿ ಕೆಲಸಗಳಿಗೆ ಕೈಜೋಡಿಸಲಾಗುವುದು ಶ್ರೀದೇವರ ಆಶೀರ್ವಾ ದದೊಂದಿಗೆ ನಿಮ್ಮೆಲ್ಲರ ಆಶೀರ್ವಾದ ನಮ್ಮ ಮೇಲಿರಲಿ ಎಂದು ತಿಳಿಸಿದರು.

ನಮ್ಮ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಾಗಿನಿಂದ ಜನಪದ ಗ್ಯಾರಂಟಿ ಯೋಜನೆಗಳೊಂದಿಗೆ ಗ್ರಾಮೀಣ ಭಾಗಗಳ ರಸ್ತೆ, ಚರಂಡಿ, ಶಿಕ್ಷಣ, ದೇವಸ್ಥಾನಗಳ ಜೀರ್ಣೋದ್ಧಾರ ಸೇರಿ ಗ್ರಾಮೀಣ ಭಾಗದ ಸರ್ವಾಂಗೀಣ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುತ್ತಿದೆ ಎಂದರು.

ನಂತರ ಶಾಸಕ ಹಂಪಯ್ಯ ನಾಯಕ ಅವರು ಮಾತನಾಡಿ, ವಲ್ಕಂದಿನ್ನಿ ಶ್ರೀಶಿವಪ್ಪ ತಾತನವರ ದೇವಸ್ಥಾನ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನ ನೀಡಲಾಗಿದೆ. ಆದಷ್ಟು ಬೇಗ ಕಾಮಗಾರಿಗಳನ್ನು ಪೂರ್ಣಗೊಳಿಸಿ ಮಠದ ಭಕ್ತಿಗೆ, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಸೂಗಪ್ಪ ಸಾಹುಕಾರ ಚುಕ್ಕಿ, ಕೆ.ಶಾಂತಪ್ಪ, ಶರಣಯ್ಯ ನಾಯಕ, ಯುವ ಮುಖಂಡರಾದ ಬ್ರಿಜ್ಜೇಶ ಪಾಟೀಲ್, ಶಿವಪ್ಪ ಗೌಡ, ಚಂದ್ರು ಕಳಸದ್, ಜಿ ಶಿವಮೂರ್ತಿ, ಅಮರೇಗೌಡ ಹಂಚಿನಾಳ, ತಾಪಂ ಕಾರ್ಯ ನಿರ್ವಾಹಕ ಅಧಿಕಾರಿ ಶಶಿಧರ ಸ್ವಾಮಿ, ಶ್ರೀನಿವಾಸ್ ರಾವ್, ರಮೇಶ ದರ್ಶನಕರ್, ಭೂಪನಗೌಡ, ಬಸವರಾಜ ಪಾಟೀಲ್, ಪರ್ವತರಡ್ಡಿ ಗೌಡ, ವೆಂಕಟೇಶ, ಅಮರಯ್ಯ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಚತುಷ್ಪತ ರಸ್ತೆಗೆ ಪಟ್ಟಣದ ಮೂರು ಕಡೆ ಮೇಲ್ಸೆತುವೆ ನಿರ್ಮಾಣ ಮಾಡುವಂತೆ ಮನವಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಆ.05**– ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಜಯಕರ್ನಾಟಕ ರಕ್ಷಣಾ ಸೇನೆ ತಾಲೂಕು ಘಟಕದಿಂದ ಜಿಲ್ಲಾಧಿಕಾರಿಗಳಿಗೆ ತಹಸೀಲ್ದಾರ್ ಭೀಮರಾಯ್ ರಾಮಸಮುದ್ರ ರವರ ಮೂಲಕ ಮನವಿ ಸಲ್ಲಿಸಿ ಜಯಕರ್ನಾಟಕ ರಕ್ಷಣಾ ಸೇನೆ ತಾಲೂಕು ಘಟಕದ ಅಧ್ಯಕ್ಷರಾದ ರಾಜಾ ವಿಜಯಕುಮಾರನಾಯಕ ಮಾತನಾಡಿ ಪಟ್ಟಣದಲ್ಲಿ ಚತುಷ್ಪತ್ ರಸ್ತೆ ನಿರ್ಮಾಣವಾಗುತ್ತಿದ್ದು ರಾಯಚೂರು ರಸ್ತೆಯಿಂದ



ಸಿಂಧನೂರು ರಸ್ತೆಯವರೆಗೂ ಪಟ್ಟಣದ ವ್ಯಾಪ್ತಿಯಲ್ಲಿನ ಜನನಿಬಿಡ ಸಾರ್ವಜನಿಕರ ಸಂಚಾರ ಹೆಚ್ಚಾಗಿರುವ ಪ್ರದೇಶಗಳಲ್ಲಿ ವೃದ್ದರಿಗೆ ,ಮಹಿಳೆಯರಿಗೆ, ಶಾಲಾ ಮಕ್ಕಳಿಗೆ,ಪಾದಾಚಾರಿಗಳಿಗೆ, ರಸ್ತೆ ದಾಟುವುದಕ್ಕೆ ಅನುಕೂಲವಾಗುವಂತೆ ಡಾ.ಬಿ.ಆರ್. ಅಂಬೇಡ್ಕರ್ ವೃತ್ತ, ವಾಲ್ಮೀಕಿ ವೃತ್ತ, ಬಸವ ವೃತ್ತಗಳಲ್ಲಿ ಮೇಲ್ಸೆತುವೆ ನಿರ್ಮಾಣ ಮಾಡಿದಲ್ಲಿ ಜನರಿಗೆ ಅನುಕೂಲವಾಗುತ್ತದೆ ಹಾಗೂ ರಸ್ತೆ ದಾಟುವ ಸಮಯದಲ್ಲಿ ಆಗುವ ಅಪಘಾತಗಳನ್ನು ತಪ್ಪಿಸುವುದಕ್ಕೆ ಸಾಧ್ಯವಾಗುತ್ತದೆ ಎಂದು ಒತ್ತಾಯಿಸಿದರು.

ಗಂಗಾಧರ ರಾವ್, ಜಲಾಲ್ ಶಾಸ್ತ್ರೀಕ್ಯಾಂಪ್,ದೊಡ್ಡಪ್ಪಹೂಗಾರ, ಅಳ್ಳಪ್ಪನಾಯಕ, ಗುರುಕುಲಕರ್ಣಿ.ವೀರೇಶಮಳ್ಳಿ,ರೇಣುಕಾರಾಜ್,ವೆಂಕೋಬಯಾದವ್,ರಂಗನಾಥ ನಾಯಕ ,ಆನಂದ ದವಾಖಾನಿ ಸೇರಿದಂತೆ ಇನ್ನಿತರರು ಇದ್ದರು

## ಹಟ್ಟಿ ಪಟ್ಟಣದಲ್ಲಿ ಮುಖ್ಯಮಂತ್ರಿಗಳ ಕಾರ್ಯಕ್ರಮ ಯಶಗೊಳಿಸೋಣ



ಯುವ ಮಾರ್ಗ ಸುದ್ದಿ

**ರಾಯಚೂರು,ಆ.05**–ಹಟ್ಟಿ, ಲಿಂಗಸಗೂರ ಮತ್ತು ಸಿರವಾರ ಪಟ್ಟಣ ಸೇರಿದಂತೆ ಸುತ್ತಲಿನ ಹಳ್ಳಿಗಳ ಗ್ರಾಮಸ್ಥರು ಹಾಗೂ ರಾಯಚೂರ ಜಿಲ್ಲೆಯ ಇನ್ನೀತರ ತಾಲೂಕಿನ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಆಗಸ್ಟ್ 6ರಂದು ಹಟ್ಟಿ ಪಟ್ಟಣದಲ್ಲಿ ನಿಗದಿಯಾದ ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮವನ್ನು ಯಶಗೊಳಿಸೋಣ ಎಂದು ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್ ಎಸ್ ಬೋಸರಾಜು ಅವರು ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ರಾಯಚೂರ ಸಿಟಿಯಲ್ಲಿನ ತಮ್ಮ ಕಚೇರಿಯಲ್ಲಿ ಆಗಸ್ಟ್ 5ರಂದು ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ರಾಯಚೂರ ಜಿಲ್ಲೆಯ ಎಲ್ಲ ಮುಖಂಡರು ಒಗ್ಗಟ್ಟಿನಿಂದ ಇದ್ದೇವೆ. ಎಲ್ಲರು ಸೇರಿ ಆಗಸ್ಟ್ 6ರಂದು ಹಟ್ಟಿಯಲ್ಲಿ ನಡೆಯುವ ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮವನ್ನು ಯಶಗೊಳಿಸುತ್ತೇವೆ ಎಂದು ಸಚಿವರು ತಿಳಿಸಿದರು.

ಹಟ್ಟಿ ಚಿನ್ನದ ಗಣಿ ಕಂಪನಿಯು ಕರ್ನಾಟಕ ಸರ್ಕಾರದ ಚಿನ್ನ ಉತ್ಪಾದಿಸುವ ಏಕೈಕ ಕಂಪನಿಯಾಗಿದೆ. ಸಿಬ್ಬಂದಿಯ ಕಾರ್ಮಿಕರ ಕಲ್ಯಾಣಕ್ಕಾಗಿ ಕಂಪನಿಯು ಅನೇಕ ಯೋಜನೆಗಳನ್ನು ರೂಪಿಸಿದೆ.

ಮುಂದುವರೆದ ಭಾಗವಾಗಿ ಹಟ್ಟಿ ಚಿನ್ನದ ಗಣಿ ಕಂಪನಿಯ ಸಿಬ್ಬಂದಿ ಹಾಗೂ ಕಾರ್ಮಿಕರ ವಸತಿ ಸಮುಚ್ಚಯ ನಿರ್ಮಾಣದ ಶಂಕುಸ್ಥಾಪನೆ ಕಾರ್ಯಕ್ರಮ ನೆರವೇರಲಿದೆ ಎಂದು ಸಚಿವರು ತಿಳಿಸಿದರು.

## ಮುಖ್ಯಮಂತ್ರಿಗಳ ಕಾರ್ಯಕ್ರಮದ ಅಂತಿಮ ಹಂತದ ಸಿದ್ಧತೆ ಪರಿಶೀಲಿಸಿದ ಅಧ್ಯಕ್ಷರು

**ರಾಯಚೂರು,ಆ.05**–ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ಅಧ್ಯಕ್ಷರು ಹಾಗೂ ಶಾಸಕರಾದ ಜೆ.ಟಿ.ಪಾಟೀಲ ಅವರು ಆಗಸ್ಟ್ 05ರಂದು ಹಟ್ಟಿ ಪಟ್ಟಣದ ಕ್ರೀಡಾಂಗಣದ ಸ್ಥಳಕ್ಕೆ ಭೇಟಿ ನೀಡಿ ಅಂತಿಮ ಹಂತದ ಸಿದ್ಧತೆಯನ್ನು ಪರಿಶೀಲಿಸಿದರು.

ಆಗಸ್ಟ್ 6ರಂದು ಬೆಳಗ್ಗೆ ಮಾನ್ಯ ಮುಖ್ಯಮಂತ್ರಿಗಳು ವಿಶೇಷ ವಿಮಾನದ ಮೂಲಕ ಕೊಪ್ಪಳ ಜಿಲ್ಲೆಯ ಖಾಸಗಿ ವಾಯುನೆಲೆಗೆ ಬಂದು, ಅಲ್ಲಿಂದ ಹೆಲಿಕ್ಯಾಪ್ಟರ್ ಮೂಲಕ ಹಟ್ಟಿ ಪಟ್ಟಣಕ್ಕೆ ಆಗಮಿಸಿ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಉಪ ಮುಖ್ಯಮಂತ್ರಿಗಳು ಸೇರಿದಂತೆ ಸಚಿವರು, ಶಾಸಕರು, ಗಣ್ಯರು ಭಾಗಿಯಾಗಲಿರುವ ಕಾರ್ಯಕ್ರಮವು ಅಚ್ಚುಕಟ್ಟಾಗಿ ನಡೆಯಬೇಕು. ಇನ್ನುಳಿದ ಸಣ್ಣಪುಟ್ಟ ಕಾರ್ಯವನ್ನು ಬೇಗನೇ ಪೂರ್ಣಗೊಳಿಸಬೇಕು ಎಂದು ಸ್ಥಳದಲ್ಲಿದ್ದ ಕಂಪನಿಯ ಅಧಿಕಾರಿಗಳಿಗೆ ಅಧ್ಯಕ್ಷರು ನಿರ್ದೇಶನ ನೀಡಿದರು.

# ಐವರು ಬಾಂಗ್ಲಾ ಪ್ರಜೆಗಳ ಬಂಧನ

**'ನವದೆಹಲಿ, ಆ.05**–ಮುಂಬರುವ ಸ್ವಾತಂತ್ರ್ಯ ದಿನಾಚರಣೆಯ ಹಿನ್ನೆಲೆಯಲ್ಲಿ ದೇಶಾದ್ಯಂತ ಕಟ್ಟೆಚ್ಚರ ವಹಿಸಿ ಭದ್ರತೆಯನ್ನು ಹೆಚ್ಚಿಸಲಾಗಿದೆ,ಇದರ ನಡುವೆಯೂ ಕೆಂಪು ಕೋಟೆ ಆವರಣಕ್ಕೆ ನುಗ್ಗಲು ಯತ್ನಿಸಿದ ಐವರು ಬಾಂಗ್ಲಾದೇಶದ ಪ್ರಜೆಗಳನ್ನು ದೆಹಲಿ ಪೊಲೀಸರು ಬಂಧಿಸಿದ್ದಾರೆ.

ಕೆಂಪು ಕೋಟೆಯ ಪ್ರವೇಶ ನಿಯಂತ್ರಣ ಬಿಂದುವಿನ ಬಳಿ ಆ ಪ್ರದೇಶದಲ್ಲಿ ನಿಯೋಜಿಸಲಾದ ಪೊಲೀಸ್ ತಂಡವು ಆರೋಪಿಗಳನ್ನು ವಿಚಾರಿಸಿ ಬಂಧಿಸಿದೆ.

20 ರಿಂದ 25 ವರ್ಷ ವಯಸ್ಸಿನ ಐವರು ನಿಯಮಿತ ತಪಾಸಣೆಯ ಸಮಯದಲ್ಲಿ ಸರಿಯಾದ ದಾಖಲೆಗಳನ್ನು ತೋರಿಸುವಲ್ಲಿ ವಿಫಲರಾಗಿದ್ದಾರೆ. ಹೆಚ್ಚಿನ ತಪಾಸಣೆ ನಡೆಸಿದಾಗ ಅವರು ಅಕ್ರಮವಾಗಿ ನೆಲೆಸಿರುವುದು ಕಂಡು ಬಂದಿದೆ. "ಇವರೆಲ್ಲರೂ ಅಕ್ರಮ ವಲಸಿಗರು. ಅವರು ಬಲವಂತವಾಗಿ ಕೆಂಪು ಕೋಟೆ ಆವರಣಕ್ಕೆ ಪ್ರವೇಶಿಸಲು ಪ್ರಯತ್ನಿಸಿದರು" ಎಂದು ಎಂದು ಉಪ ಪೊಲೀಸ್ ಆಯುಕ್ತ (ಉತ್ತರ ಜಿಲ್ಲೆ) ರಾಜ ಬಂಥಿಯಾ ತಿಳಿಸಿದ್ದಾರೆ. ವಿಚಾರಣೆಯ ಸಮಯದಲ್ಲಿ, ಅವರು ಸುಮಾರು ಮೂರ್ನಾಲ್ಕು ತಿಂಗಳ ಹಿಂದೆ ಭಾರತಕ್ಕೆ ಅಕ್ರಮವಾಗಿ ಪ್ರವೇಶಿಸಿ ದೆಹಲಿಯಲ್ಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದರು ಎಂದು ತಿಳಿದುಬಂದಿದೆ.

ಜುಲೈ 15 ರಿಂದ ಕೆಂಪು ಕೋಟೆಯನ್ನು ಸಾರ್ವಜನಿಕರಿಗೆ ಮುಚ್ಚಲಾಗಿದೆ ಎಂದು ತಮಗೆ ತಿಳಿದಿಲ್ಲ ಎಂದು ಅವರು ಹೇಳಿಕೊಂಡಿದ್ದಾರೆ. ಅವರಿಂದ ಬಾಂಗ್ಲಾದೇಶದ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ, ಆದರೆ ಅವರ ವಿಚಾರಣೆಯ ಸಮಯದಲ್ಲಿ ಯಾವುದೇ ಅನುಮಾನಾಸ್ಪದ ವಸ್ತು ಅಥವಾ ಚಟುವಟಿಕೆ ಬೆಳಕಿಗೆ ಬಂದಿಲ್ಲ ಎಂದು ಬಂಥಿಯಾ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H